ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 127 | ದಿನಾಂಕ : 15-06-2026 ಸೋಮವಾರ | Date : 15-06-2026 Monday | RNI: Karkan/2023/89199 | Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ಜನರು ನನ್ನ ಕನಸಿಗೆ ನಗ್ತಿದ್ರು 100% ಎಥೆನಾಲ್‌ಗೆ ಒಪ್ಪಿಗೆ ನೀಡುವ ಫೈಲ್‌ಗೆ ಸಹಿ ಹಾಕಿದ್ದೇನೆ ಎಂದ ಗಡ್ಕರಿ-ನೋಡಿ

**ನಾಗ್ಪುರ,ಜೂ.14-**ಶೇ.100ರಷ್ಟು ಎಥೆನಾಲ್ ಮಿಶ್ರಿತ ಇಂಧನಕ್ಕೆ ಕಾನೂನು ಮಾನ್ಯತೆ ನೀಡಲು ಅನುಮೋದನೆ ಕೊಟ್ಟಿರುವುದಾಗಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಖಾತೆಗಳ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಈ ನಡೆ ದೇಶದ ಆಮದು ಅವಲಂಬನೆಯನ್ನು ತಗ್ಗಿಸಲು ಗಮನಾರ್ಹವಾಗಿ ನೆರವಾಗುತ್ತದೆ ಎಂದು ಅವರು ತಿಳಿಸಿದರು.ಪ್ರಧಾನಿ ನರೇಂದ್ರ ಮೋದಿಯವರ ನಾಯಕ ತ್ವದ 12 ವರ್ಷಗಳ ಕುರಿತು ಶನಿವಾರ ಮಾಧ್ಯಮಗೋಷ್ಠಿಯಲ್ಲಿ ಅವರು ಮಾತನಾಡು ತ್ತಿದ್ದರು. ನಿನ್ನೆ ರಾತ್ರಿ 8ಕ್ಕೆ ನಾನು ಶೇ.100ರಷ್ಟು ಎಥೆನಾಲ್‌ಗೆ ಕಾನೂನಿನ ಮಾನ್ಯತೆ

➘4

## ರೌಡಿಶೀಟರ್ ಕೊಲೆ ಪ್ರಕರಣ: ತಪ್ಪಿಸಿಕೊಳ್ಳಲು ಯತ್ನಿಸಿದ ಆರೋಪ್ಪಿ ಕಾಲಿಗೆ ಪೊಲೀಸರ ಗುಂಡೇಟು

**ಶಿವಮೊಗ್ಗ,ಜೂ.14-**ಮಹಜರಿಗೆ ಕರೆದೊಯ್ದ ವೇಳೆ ಹಲ್ಲೆ ನಡೆಸಿ, ತಪ್ಪಿಸಿಕೊಳ್ಳಲು ಯತ್ನಿಸಿದ ಕೊಲೆ ಆರೋಪಿಯ ಕಾಲಿಗೆ ಪೊಲೀಸರು ಗುಂ ಡೇಟು ನೀಡಿ, ವಶಕ್ಕೆ ಪಡೆದಿರುವ ಘಟನೆ ಇಂದು ಬೆಳಗಿನ ಜಾವ ಹೊಳೆ ಬೆನವಳ್ಳಿಯ ರಿಂಗ್ ರೋಡ್‌ನಲ್ಲಿ ನಡೆದಿದೆ.

ಜೂನ್ 12 ರಂದು ನಡೆದಿದ್ದ ರೌಡಿಶೀಟರ್ ನರಸಿಂಹ ಕೊಲೆ ಪ್ರಕರಣದ ಪ್ರಮುಖ ಆರೋಪಿ ಮಧು ಎಂಬಾತನ ಕಾಲಿಗೆ ಪೊಲೀಸರು ಗುಂಡೇಟು ನೀಡಿದ್ದಾರೆ.

ಪ್ರಕರಣ ಸಂಬಂಧ ಕೋಟೆ ಪೊಲೀಸರು, ಆರೋಪಿ ಮಧುನನ್ನು ಮಹಜರಿಗೆ ಕರೆದುಕೊಂಡು ಹೋಗಿದ್ದರು. ಈ ವೇಳೆ ಆರೋಪಿ ಮಧು ಶೌಚಕ್ಕೆ ಹೋಗಬೇಕು ಎಂದಿದ್ದ. ಆಗ ಪೊಲೀಸರು

➘4

## ಡಾ. ರಾಜಶಂಕರ್ ಎನ್. ಜನ್ಮದಿನ ಅಂಗವಾಗಿ 100 ಗಿಡಗಳ ನೆಡುವ ಕಾರ್ಯಕ್ರಮ

**ರಾಯಚೂರು,ಜೂ.14-**ಪರಿಸರ ಸಂರಕ್ಷಣೆ ಮತ್ತು ಹಸಿರು ವಾತಾವರಣ ನಿರ್ಮಾಣದ ಉದ್ದೇಶದಿಂದ ಶ್ರೀ ವರಸಿದ್ಧಿ ಆಂಜನೇಯ ಸ್ವಾಮಿ ದೇವಸ್ಥಾನದ ಹಾಗೂ ನವೋದಯ ಶಿಕ್ಷಣ ಮಹಾವಿದ್ಯಾಲಯದ ಆಡಳಿತ ಮಂಡಳಿ,ಮಾನವ ಹಕ್ಕುಗಳು ಮತ್ತು ಭ್ರಷ್ಟಾಚಾರ ವಿರೋಧಿ ಸಂಸ್ಥೆ, ವಲಯ ಅರಣ್ಯ ಇಲಾಖೆ ಹಾಗೂ ವೀರಶೈವ ಲಿಂಗಾಯತ ಸಮಾಜ ಸಂಯುಕ್ತ ಆಶ್ರಯದಲ್ಲಿ ಡಾ. ರಾಜಶಂಕರ್ ಎನ್. ಅವರ ಜನ್ಮದಿನದ ಅಂಗವಾಗಿ 100 ಗಿಡಗಳನ್ನು ನೆಡುವ ಕಾರ್ಯಕ್ರಮವನ್ನು ನಗರದ ಶ್ರೀ ರಾಮಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ಹಮ್ಮಿಕೊಳ್ಳಲಾಯಿತು.

ಗಿಡ ನೆಡುವ ಕಾರ್ಯಕ್ರಮದಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಮಾಡಲಾಯಿತು. ವಲಯ ಅರಣ್ಯ ಇಲಾಖೆಯ ಅಧಿಕಾರಿಗಳಾದ ರಾಜೇಶ್ ನಾಯಕ್ ,ಮಾತನಾಡಿ ಜನ್ಮದಿನವನ್ನು ಕೇವಲ ಕೇಕ್ ಕತ್ತರಿಸುವ ಮೂಲಕ ಆಚರಿಸುವುದಕ್ಕಿಂತ ಸಮಾಜಕ್ಕೆ

➘4

# ಪಂಚ ಗ್ಯಾರಂಟಿ ಯೋಜನೆ ನಿಲ್ಲುವುದಿಲ್ಲ

## ಪ್ರತಿಪಕ್ಷಗಳ ವದಂತಿಗಳಿಗೆ ಕಿವಿಗೊಡಬೇಡಿ-ಸಿಎಂ



**ಬೆಂಗಳೂರು,ಜೂ.14-**ಕಾಂಗ್ರೆಸ್ ಸರ್ಕಾರದ ಹೆಮ್ಮೆಯ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ. ಈ ಬಗ್ಗೆ ವಿಪಕ್ಷಗಳು ಹಬ್ಬಿಸುತ್ತಿರುವ ಸುಳ್ಳು ಸುದ್ದಿಗಳಿಗೆ ಸಾರ್ವ ಜನಿಕರು ಕಿವಿಗೊಡಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕೆಲವರು ಸತ್ತವರ ಹೆಸರಿನಲ್ಲಿ ನಕಲಿ ದಾಖಲೆ ಸೃಷ್ಟಿಸಿ, ಅಕೌಂಟ್ ತೆರೆದು ಯೋಜನೆಯ ಲಾಭ ಪಡೆಯುತ್ತಿದ್ದಾರೆ.

ಹೀಗಾಗಿ ಗ್ಯಾರಂಟಿ ಯೋಜನೆ ಫಲಾನುಭವಿಗಳ ದೃಢೀಕರಣಕ್ಕಾಗಿ, ಅವರ ಹೆಸರು, ವಿಳಾಸ, ಅಕೌಂಟ್ ನಂಬರ್ ಖಚಿತಪಡಿಸಿಕೊಳ್ಳಲು ಮತ್ತೆ ಅರ್ಜಿ ಸಲ್ಲಿಸಲು ಹೇಳಲಾಗಿದೆಯೇ, ಹೊರತು ಯೋಜನೆಗಳನ್ನು ನಿಲ್ಲಿಸಲು ಅಲ್ಲ. ಎಲ್ಲ ಗ್ಯಾರಂಟಿ ಯೋಜನೆಗಳು ಶೇಕಡಾ ನೂರಕ್ಕೆ ನೂರರಷ್ಟು ಮುಂದುವರೆಯುತ್ತವೆ. ಯಾರೂ ಆತಂಕಪಡುವ ಅವಶ್ಯಕತೆ ಇಲ್ಲ ಎಂದು ತಿಳಿಸಿದ್ದಾರೆ.

ಸಿಎಂ ನಿನ್ನೆ ಮಾಧ್ಯಮಗೋಷ್ಠಿ ವೇಳೆ ಹೇಳಿದ್ದೇನು? ಜಿಲ್ಲಾಧಿಕಾರಿಗಳು, ಸಿಇಒಗಳು, ಪೊಲೀಸ್ ವರಿಷ್ಠಾಧಿಕಾರಿಗಳ ಜತೆ ವಿಧಾನಸೌಧದಲ್ಲಿ ಶನಿವಾರ ಸಭೆ ನಡೆಸಿ ಬಳಿಕ ಮಾಧ್ಯಮಗೋಷ್ಠಿ ನಡೆಸಿದ ಸಿಎಂ, ಅನರ್ಹರನ್ನು ಕೈಬಿಟ್ಟು ಕೇವಲ ನೈಜ ಅರ್ಹ ಫಲಾನುಭವಿಗಳಿಗೆ ಮಾತ್ರ ಯೋಜನೆ ತಲುಪಿಸಲು ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಎರಡೂ ಗ್ಯಾರಂಟಿಗಳಿಗೆ ಸಾರ್ವಜನಿಕರು ಮತ್ತೊಮ್ಮೆ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗುತ್ತದೆ. ಆ ಮೂಲಕ ಮಾಹಿತಿಗಳನ್ನು ಪಡೆದು, ಅನರ್ಹರನ್ನು ಕೈ ಬಿಡಲಾಗುವುದು ಎಂದು ತಿಳಿಸಿದ್ದರು.

# ಹಟ್ಟಿ ಚಿನ್ನದ ಗಣಿ ಅಧುನೀಕರಕ್ಕೆ 378 ಕೋಟಿ ರೂ ಕ್ರಿಯಾಯೋಜನೆ ದೊರೆಯದ ಅನುಮೋದನೆ-ಉತ್ಪಾದನೆ ಹೆಚ್ಚಳಕ್ಕೆ ಅಡ್ಡಿ..!

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು, ಜೂ.14-** ದೇಶದ ಏಕೈಕ ಚಿನ್ನದ ಹಟ್ಟಿ ಚಿನ್ನದ ಗಣಿ ಅಧುನೀಕರಣಕ್ಕೆ ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿರುವ ಪ್ರಸ್ತಾವನೆಗೆ ಪರಿಶೀಲನಾ ಹಂತದಿಂದ ಮೇಲೆಳದ ಸ್ಥಿತಿಯಲ್ಲಿದ್ದು ಬದಲಾದ ತಂತ್ರಜ್ಞಾನಕ್ಕೆ ಅನುಗುಣವಾಗಿ ಚಿನ್ನದ ಉತ್ಪಾದನೆ ಹೆಚ್ಚಿಸಲು ಸರ್ಕಾರ ನಿರಾಸಕ್ತಿ ಅಡ್ಡಿಯಾಗಿದೆ.

ಚಿನ್ನದ ಬೆಲೆ ಗಗನಕ್ಕೇರಿದ್ದು ಗಣಿಯಲ್ಲಿ ಉತ್ಪಾದನೆ ಏರಿಕೆಯಾಗುತ್ತಲೇ ಇರುವಾಗ ಅಧುನೀಕರಣಕ್ಕೆ ಮುಂದಾದರೆ ಮತ್ತಷ್ಟು ಉತ್ಪಾದನೆ ಹೆಚ್ಚಿಸುವ ಅವಕಾಶಗಳಿದ್ದರೂ ಸರ್ಕಾರ ಆರ್ಥಿಕ ಕಾರಣಗಳನ್ನು ನೀಡಿ ಸಲ್ಲಿಕೆಯಾಗಿರುವ ಪ್ರಸ್ತಾವನೆಗಳಿಗೆ ಅನುಮೋದನೆ ನೀಡದೇ ಹೋಗಿದೆ.

ಹಟ್ಟಿ ಚಿನ್ನದ ಗಣಿಯಲ್ಲಿ 378.26 ಕೋಟಿ ವೆಚ್ಚದಲ್ಲಿ ಡಿಕ್ಲೇನ ನಿರ್ಮಾಣ ಹಾಗೂ ಗಣಿ ಅಧುನೀಕರಣಕ್ಕೆ ಹಟ್ಟಿ ಚಿನ್ನದ ಗಣಿಯಿಂದ ಗಣಿ ಇಲಾಖೆ ಪ್ರಸ್ತಾವನೆ ಸಲ್ಲಿಕೆಯಾಗಿ ವರ್ಷಗಳೇ ಉರುಳಿವೆ. ಅನುಮೋದನೆ ದೊರೆಯದೇ ಇರುವದರಿಂದ ಪರಿಶೀಲನಾ ಹಂತದಲ್ಲಿಯೇ ಇದೆ ಎಂದು ಗಣಿ ಇಲಾಖೆ ಮಾಹಿತಿ ನೀಡಿದೆ.



ಹಟ್ಟಿ ಚಿನ್ನದ ಗಣಿಯಲ್ಲಿ ಸರ್ಕ್ಯೂಲ್ಯ ಶಾಫ್ಟ್ ಮತ್ತು 50 ಟಿಎಚ್‌ಪಿ ಸಾಮರ್ಥ್ಯದ ಹೊಸ ಎರಡು ಹೊಸ ಬಾಲ್ ಮಿಲ್‌ಗಳನ್ನು ಅಳವಡಿಸಿ 2 ಸಾವಿರ ದಿಂದ 3 ಸಾವಿರ ಅದಿರಿನ ಸಂಸ್ಕರಣ ಸಾಮರ್ಥ್ಯ ಹೆಚ್ಚಿಸಲು ಉದ್ದೇಶಿಸಲಾಗಿದೆ. ಹಟ್ಟಿ ದಕ್ಷಿಣ ಮತ್ತು ಗ್ರೇ ಶಾಫ್ಟ ಅಭಿವೃದ್ದಿಪಡಿಸಲಾಗಿದ್ದು ಉತ್ಪಾದನೆ ಪ್ರಾರಂಭಿಸಲಾಗಿದೆ. ಹೀರಾ ಬುದ್ದಿನ್ನಿ ಗಣಿಯನ್ನು ಅಭಿವೃದ್ದಿಗೆ 175 ಕೋಟಿ ರೂ ಕ್ರಿಯಾಯೋಜನೆ ಅನುಮೋದನೆ ದೊರೆತಿಯಾದರೂ ಕೆಲಸ ಪ್ರಾರಂಭವಾಗಿಲ್ಲ.


ರಾಜ್ಯದ ಆದಾಯ ಹೆಚ್ಚಿಸಲು ಪ್ರಮುಖ ಪಾತ್ರವಹಿಸುತ್ತಿರುವ ಹಟ್ಟಿ ಚಿನ್ನದ ಗಣಿ ಅಭಿವೃದ್ದಿಯ ಕುರಿತು ರಾಜ್ಯಸರ್ಕಾರ ನಿರಾಸಕ್ತಿ, ಈ ಭಾಗದ ಶಾಸಕರುಗಳ ಒತ್ತಡ ಕೊರತೆಯಿಂದಾಗಿ ಗಣಿ ಉತ್ಪಾದನೆ ಮತ್ತಷ್ಟು ಹೆಚ್ಚಿಸಿ ಉದ್ಯೋಗ ಸೃಷ್ಟಿಸುವ ಕೆಲಸ ನಡೆಯದೇ ಇರುವದು ಕಳವಳಕಾರಿ. ಪಂಚ ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಸಮಸ್ಯೆಯಿಲ್ಲ ಎಂದು ಸಮರ್ಥಿಸಿಕೊಳ್ಳುವ ಸರ್ಕಾರ ಹಟ್ಟಿ ಚಿನ್ನದ ಗಣಿ ಅಧುನೀಕರಣಕ್ಕೆ ಮುಂದಾಗದೇ ಇರುವದು, ಅವೈಜ್ಞಾನಿಕ ಯೋಜನೆಗಳನ್ನು ರೂಪಿಸಿ ಆರ್ಥಿಕ ಹೊರೆಗೆ ಕಾರಣವಾಗಿರುವ ದೂರುಗಳನ್ನು ಎದುರಿಸುವಂತಾಗಿದೆ.

# ರಾತ್ರಿಯಡಿ ಸುರಿದ ಮಳಗೆ ಜನಜೀವನ ಅಸ್ತವ್ಯಸ್ಥ : ಹಲವಡೆ ಸಂಚಾರ ಸ್ಥಗಿತ-ಮನೆಗಳಿಗೆ ನುಗ್ಗಿದ ನೀರು

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-**ಜಿಲ್ಲೆಯಾದ್ಯಂತ ಭಾನುವಾರ ಬೆಳ್ಳಂಬೆಳಿಗ್ಗೆ ಆರಂಭವಾದ ಧಾರಾಕಾರ ಮಳೆಯಿಂದ ಜನಜೀವನ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ. ಕೆಲವೇ ಗಂಟೆಗಳ ಮಳೆಗೆ ಹಳ್ಳ, ಕೊಳ್ಳಗಳು ತುಂಬಿ ಹರಿಯುತ್ತಿದ್ದರೆ, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಹಲವು ಸಮಸ್ಯೆಗಳು ಉಂಟಾಗಿ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುವಂತಾಗಿದೆ.

ತಾಲೂಕಿನ ಇಡಪನೂರು ಗ್ರಾಮದ ಸಮೀಪದ ಹಳ್ಳದಲ್ಲಿ ನೀರಿನ ಹರಿವು ಏಕಾಏಕಿ ಹೆಚ್ಚಾಗಿ ಕಿರು ಸೇತುವೆ ಮೇಲೆಯೇ ನೀರು ಹರಿದ ಪರಿಣಾಮ ಮೀರಾಪುರ-ಯರಗೇರಾ ಸಂಪರ್ಕ ರಸ್ತೆ ಸಂಪೂರ್ಣ ಬಂದ್ ಆಗಿದೆ. ಸೇತುವೆ ಮೇಲೆ ನೀರು ಹರಿಯುತ್ತಿದ್ದ ಹಿನ್ನೆಲೆಯಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿದ್ದು, ಸ್ಥಳೀಯರು ಪರ್ಯಾಯ ಮಾರ್ಗಗಳನ್ನು ಬಳಸುವ ಅನಿವಾರ್ಯತೆ



ಎದುರಾಗಿದೆ. ಅಪಾಯದ ನಡುವೆಯೂ ಕೆಲವರು ಸೇತುವೆ ದಾಟಲು ಯತ್ನಿಸಿದ್ದು, ಸ್ಥಳೀಯರು ಎಚ್ಚರಿಕೆ ವಹಿಸುವಂತೆ ಮನವಿ ಮಾಡಿದ್ದಾರೆ.

ನಗರದ ಐಡಿಎಸ್‌ಎಂಟಿ ಲೇಔಟ್‌ನಲ್ಲಿ ಅವೈಜ್ಞಾನಿಕ ಚರಂಡಿ ಕಾಮಗಾರಿಯಿಂದ ಮಳೆನೀರು ಸರಾಗವಾಗಿ ಹರಿಯದೆ ರಸ್ತೆಗಳಲ್ಲೇ ನಿಂತಿದೆ. ಇದರಿಂದ ರಸ್ತೆಗಳು ಜಲಾವೃತಗೊಂಡು ವಾಹನ ಸವಾರರು ಹಾಗೂ ಪಾದಚಾರಿಗಳು ಸಂಚಾರಕ್ಕೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವೆಡೆ ರಸ್ತೆಗಳ ಮೇಲೆಯೇ ನೀರು ನಿಂತಿದ್ದರಿಂದ ದ್ವಿಚಕ್ರ ವಾಹನಗಳು ನೀರಿನಲ್ಲಿ ಸಿಲುಕಿದ್ದವು ವಾಹಗಳ ಸವಾರರ ರಸ್ತೆ ಸಂಚಾರವು ಅಸ್ತವ್ಯಸ್ತಗೊಂಡಿತು.

ನಗರದ ಹಳೆ ಆಶ್ರಯ ಕಾಲೋನಿಯಲ್ಲೂ ಪರಿಸ್ಥಿತಿ ಗಂಭೀರವಾಗಿದ್ದು, ಚರಂಡಿ ಮಿಶ್ರಿತ ಮಳೆ ನೀರು

➘4

## ರಿಮ್ಸ್‌ಗೆ ಕಾರುಣ್ಯ ಆಶ್ರಮದಿಂದ ನೇತ್ರ ಮತ್ತು ದೇಹದಾನ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-**ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯಾ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯರ ಆಶ್ರಮದಲ್ಲಿ ಆಶ್ರಯ ಪಡೆದಿದ್ದ 62 ವರ್ಷದ ಹುಸೇನ್ ಬಿ. ಅವರು ಅನಾರೋಗ್ಯದಿಂದ ನಿಧನರಾದರು.

ಅವರಿಗೆ ವಾರಸುದಾರರು ಇಲ್ಲದ ಹಿನ್ನೆಲೆಯಲ್ಲಿ ಪರಿಚಯಸ್ಥರು ಹಾಗೂ ಕಾರುಣ್ಯ ಸಂಸ್ಥೆಯ ಪದಾಧಿಕಾರಿಗಳ ಒಪ್ಪಿಗೆಯೊಂದಿಗೆ ಅವರ ನೇತ್ರ ಮತ್ತು ದೇಹವನ್ನು ರಾಯಚೂರಿನ ರಿಮ್ಸ್ ವೈದ್ಯಕೀಯ ಮಹಾವಿದ್ಯಾಲಯಕ್ಕೆ ದಾನ ಮಾಡಲಾಯಿತು. ಈ ಸಂದರ್ಭದಲ್ಲಿ ಆಶ್ರಮದ ಕಾ ರ್ಯಾಧ್ಯಕ್ಷ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ, ನಮ್ಮ ಕಣ್ಣುಗಳು ಮತ್ತೊಬ್ಬರ ಬದುಕಿಗೆ ಬೆಳಕಾಗಲಿ, ದೇಹವು ವೈದ್ಯಕೀಯ ಶಿಕ್ಷಣ ಮತ್ತು ಸಂಶೋಧನೆಗೆ ಉಪಯೋಗವಾಗಲಿ ಎಂಬ ಉದ್ದೇಶದಿಂದ ನೇತ್ರ ಮತ್ತು ದೇಹದಾನ ಮಾಡಲಾಗಿದೆ. ಸಮಾಜದಲ್ಲಿ ನೇತ್ರದಾನ ಹಾಗೂ ದೇಹದಾನದ ಕುರಿತು ಜಾಗೃತಿ ಮೂಡಿಸುವ ಕಾರ್ಯವನ್ನು ನಮ್ಮ ಸಂಸ್ಥೆ ನಿರಂತರವಾಗಿ ನಡೆಸುತ್ತಿದೆ ಎಂದು ಹೇಳಿದರು. ನಂತರ ರಿಮ್ಸ್ ವೈದ್ಯಕೀಯ ಮಹಾವಿದ್ಯಾಲಯದ ಶವ ವಾಹನಕ್ಕೆ ಮೃತದೇಹವನ್ನು ಹಸ್ತಾಂತರಿಸಲಾಯಿತು.ಈ ಸಂದರ್ಭದಲ್ಲಿ ರಿಮ್ಸ್ ಅಂಗರಚನಾ ಶಾಸ್ತ್ರ ವಿಭಾಗದ ಸಿಬ್ಬಂದಿ, ಶ್ರೀಮಠ ಸೇವಾ ಟ್ರಸ್ಟ್ ಸದಸ್ಯರು, ಆಶ್ರಮದ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ದಿವಂಗತ ಬೋಳಬಂಡೆಪ್ಪ ರಚಿಸಿದ ಕ್ರಾಂತಿ ನಿನಾದವಾಗಲಿ ಕೃತಿ ಬಿಡುಗಡೆ

## ಸಮಾಜದ ಬದಲಾಣೆಗೆ ಶ್ರಮಿಸಿದವರನ್ನು ಸ್ಮರಿಸಬೇಕು-ಅಲ್ಲಂಪ್ರಭು ಬೆಟ್ಟದೂರು




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-**ಸಮಾಜದ ಸುಧಾರಣೆ ಮತ್ತು ಬದಲಾವಣೆಗಾಗಿ ಬದುಕನ್ನೇ ಸಮರ್ಪಿಸಿದ ವ್ಯಕ್ತಿಗಳನ್ನು ಸಮಾಜವು ಕೃತಜ್ಞತೆಯಿಂದ ನೆನೆಯಬೇಕು. ಇಂತಹ ವ್ಯಕ್ತಿಗಳ ಬದುಕು ಮತ್ತು ವಿಚಾರಧಾರೆ ಮುಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಬೇಕಾದರೆ ಅವರ ಕೊಡುಗೆಗಳನ್ನು ನಿರಂತರವಾಗಿ ಸ್ಮರಿಸಬೇಕು ಎಂದು ಖ್ಯಾತ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಹೇಳಿದರು.

ಅವರಿಂದು ನಗರದ ಕನ್ನಡ ಭವನದಲ್ಲಿ ದಲಿತ ಕವಿ ಬೋಳಬಂಡೆಪ್ಪ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ದಲಿತ ಕವಿ ಬೋಳಬಂಡೆಪ್ಪ ಅವರ ಕ್ರಾಂತಿ ನಿನಾದಿಸಲಿ ಕವನ ಸಂಕಲನ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

➘4

## ಲಾರಿ ಮಾಲೀಕರ ಫೇಡೆರೇಷನ್ 35 ನೇ ವಾರ್ಷಿಕ ಸಭೆ

## ಸಂಘಟಿತವಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು-ನವೀನರೆಡ್ಡಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-**ಲಾರಿ ಮಾಲೀಕರ ಒಗ್ಗಟ್ಟಿನ ಕೊರತೆಯಿಂದಾಗಿ ಲಾರಿಗಳನ್ನು ನಿರ್ವಹಣೆ ಮಾಡಲು ಆಗದೇ ಬಿಡಲೂ ಆಗದೇ ಎಲ್ಲಾ ಟೆಕ್ಸ್ ಕಟ್ಟಿದರೂ ಲಂಚ ನೀಡಿ ಲಾರಿ ನಡೆಸುವ ಸ್ಥಿತಿ ಎದುರಿಸುವಂತಾಗಿದೆ. ಸಂಘಟಿತವಾಗಿ ಸರ್ಕಾರ ಕಣ್ತೇರಿಸುವ ಕೆಲಸ ಮುಂದಾಗಬೇಕಿದೆ ಎಂದು ಫೆಡರೇಷನ್ ಆಫ್ ಕರ್ನಾಟಕ ಲಾರಿ ಓನರ್ಸ್ ಅಸೋಸಿಯೇಷನ್ ರಾಜ್ಯಾಧ್ಯಕ್ಷ ನವೀನರೆಡ್ಡಿ ಹೇಳಿದರು.

ಅವರಿಂದು ಗ್ರೀನ್ ಪ್ಯಾಲೇಸ್ ಫಂಕ್ಷನ್ ಹಾಲ್‌ನಲ್ಲಿ ಆಯೋಜಸಲಾಗಿದ್ದ ಸಂಘದ 35 ನೇ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಲಾರಿಗಳನ್ನು ನಂಬಿ ಮಾಲೀಕರು ಜೀವನ ನಡೆಸುತ್ತಿದ್ದಾರೆ. ಆದರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳುತ್ತಿವೆ. ಲಾರಿಗಳ ಫಿಟ್‌ನೆಸ್ ಹೆಸರಿನಲ್ಲಿ 1200 ರೂ ಶುಲ್ಕವನ್ನು 30 ಸಾವಿರ ರೂಗಳಿಗೆ ಹೆಚ್ಚಿಸಲಾಗಿದೆ. 20 ವರ್ಷ ಮೇಲ್ಪಟ್ಟ ಲಾರಿಗಳನ್ನು ರಸ್ತೆಗಿಳಿಸದಂತೆ ತಡೆಯಲಾಗುತ್ತಿದೆ.

➘4

## ಪಾಮನಕಲ್ಲೂರಿನಲ್ಲಿ ಆರ್‌ಕೆಬಿ ಫೌಂಡೇಶನ್‌ನಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-** ಆರ್.ಕೆ.ಬಿ. ಪೌಂಡೇಷನ್ ಎಮ್.ಕೆ.ಭಂಡಾರಿ ಆಸ್ಪತ್ರೆ ರಾಯಚೂರು ಸಹಯೋಗದಲ್ಲಿ ಪಾಮನಕಲ್ಲೂರಿನಲ್ಲಿ ಬಿ.ಆರ್.ಇನ್‌ಫ್ರೋ ಪ್ರೋಜೆಕ್ಟ್ ಲಿಮಿಟೆಡ್ ಸಿಬ್ಬಂಧಿಗಳಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಾಗಿತ್ತು.

ಕೈಟ್ ಇಡೆಸ್ಟ್ರಿಸ್ ಪ್ರೈ.ಲಿ.ಚೆನ್ನೈ ಪ್ರಾಯೋಜಕತ್ವದಲ್ಲಿ ಆಯೋಜಿಸಿದ್ದ ಶಿಬಿರದಲ್ಲಿ ಎಮ್.ಕೆ.ಭಂಡಾರಿ ಆಸ್ಪತ್ರೆಯ ಕಿಡ್ನಿ ತಜ್ಞ ಡಾ. ರಘುಕಾಂತ ರೆಡ್ಡಿ ಮಾತಾನಾಡುತ್ತಾ ಇವತ್ತೀನ ದಿನಮಾನಗಳಲ್ಲಿ ಕಿಡ್ನಿ ತೊಂದರೆಯಿಂದ ಬಹಳಷ್ಟು ಜನರು ಬಲಿಯಾಗುತ್ತಿದ್ದಾರೆ. ಸಕ್ಕರೆ ಕಾಯಿಲೆ, ರಕ್ತತ್ತೊಡ ಕಾಯಿಲೆಗಳನ್ನು ಬರಲಾರದ ಹಾಗೆ ನೋಡಿಕೊಂಡಾಗ ತಾವು ಕಿಡ್ನಿಯ ತೊಂದರೆಯಿಂದ ಸುರಕ್ಷಿತರಾಗಿ ಇರುತ್ತೀರಿ. ಯಾರಿಗೆ ಸಕ್ಕರೆ ಕಾಯಿಲೆ, ರಕ್ತದೊತ್ತಡ ಬಂದಿದ್ದರೇ ಅಂತವರು ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆಯನ್ನು ತೆಗೆದುಕೊಂಡು ತಮ್ಮ ಜೀವನ ಶೈಲಿಯನ್ನು ಬದಲಾಯಿಸಿಕೊಂಡು ಒಳ್ಳೆಯ ಆರೋಗ್ಯವಂತರಾಗಿ ಇರಬೇಕೆಂದು ಸಲಹೆ ನೀಡಿದರು.

ಜನರಲ್ ಸರ್ಜನ್ ಡಾ. ಶಾರೀಕ್‌ಖಾನ್ ಮಾತಾನಾಡುತ್ತಾ, ಇಲ್ಲಿಬಂದತಹ ಎಲ್ಲಾ ಶಿಬಿರಾರ್ಥಿಗಳು ಬಿಸಿಲು ಮಳೆ ಎನ್ನದೆ ತಾವು ಆರೋಗ್ಯದ ಕಡೆ ಗಮನ ಕೊಡದೇ ತಮ್ಮ ಆರೋಗ್ಯವನ್ನು ನಿರ್ಲಕ್ಷ್ಯವಹಿಸುತ್ತಿದ್ದೀರಿ. ಆದ್ದರಿಂದ ತಾವುಗಳು ತಮ್ಮ ಆರೋಗ್ಯದ ಕಡೆ ಗಮನ ಹರಿಸಬೇಕೆಂದು ಸಲಹೆ ನೀಡಿದರು.

ಬಿ.ಆರ್. ಇನ್‌ಫ್ರೋ ಪ್ರೋಜೆಕ್ಟ್ ಲಿಮಿಟೆಡ್‌ನ ಅಸ್ಟಿಂಟ್

➘4

## ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಉಚಿತ ಯೋಗಶಿಬಿರ: ದೇಹ ಮತ್ತು ಮನಸು ಸಧೃಢವಾಗಿರಲು ಯೋಗ ಸಹಕಾರಿ-ಶ್ರೀಪಾದ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.14-**ದೇಹದಲ್ಲಿ ನಕರಾತ್ಮಕ ವಿಷಯಗಳಿಂದ ಶಾಂತಿ, ನೆಮ್ಮದಿಯನ್ನು ಕಳೆದುಕೊಂಡು ಅನಾರೋಗ್ಯ ತುತ್ತಾಗುವದಿರಂದ ಹೊರಬರಲು ಯೋಗವೇ ದಾರಿಯಾಗಿದೆ ಎಂದು ಯೋಗತರಬೇತಿದಾರ ಶ್ರೀಪಾದಹೇಳಿದರು.

ಅವರಿಂದು ಎಲ್‌ವಿಡಿ ಕಾಲೇಜಿನ ಮೈದಾನದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಪತಂಜಲಿ ಯೋಗ ಸಮಿತಿ ಹಾಗೂ ಎಲ್‌ವಿಡಿ ಕಾಲೇಜುಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಉಚಿತ ಪ್ರಾಣಾಮಯ ಯೋಗ ಶಿಬಿರ ಉದ್ದೇಶಿಸಿ ಮಾತನಾಡಿದರು.

ದೇಹ ಮತ್ತು ಆರೋಗ್ಯ ಎರಡನ್ನು ಜೋಡಿಸುವ ಮೂಲಕ ಯೋಗ ನಿರಂತರ ಅಭ್ಯಾಸದಿಂದ ಆರೋಗ್ಯವಂತ ಜೀವನ ನಡೆಸಲು ರಹದಾರಿಯಾಗಿದೆ ಎಂದರು. ಒತ್ತಡದ ಜೀವನದ ಮಧ್ಯ ಏಕಾಗ್ರತೆಯೊಂದಿಗೆ ಮನಸ್ಸು

➘4

# ವಿವಾದಾತ್ಮಕ ಹೇಳಿಕೆ: ಪ್ರೊ ಭಗವಾನ್ ವಿರುದ್ಧ ಕೇಸ್ ಬುಕ್, ಕ್ಷಮೆ ಕೇಳಬೇಕು ಉಗ್ರಪ್ಪ

**ದಾವಣಗೆರೆ, ಜೂ.14-**ಶ್ರೀರಾಮ ದಶರಥನ ಮಗ ಅಲ್ಲ' ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದ ಪ್ರೊ. ಕೆಎಸ್ ಭಗವಾನ್ ವಿರುದ್ಧ ದಾವಣಗೆರೆ ಜಿಲ್ಲೆಯ ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹಿಂದೂ ಧಾರ್ಮಿಕ ಭಾವನೆಗಳಿಗೆ ತೀವ್ರ ಧಕ್ಕೆ ತಂದಿದೆ ಎಂದು ಆರೋಪಿಸಿ, ಹಿಂದೂ ಜಾಗರಣ ವೇದಿಕೆಯ ಹರಿಹರ ತಾಲೂಕು ಪ್ರಧಾನ ಕಾರ್ಯದರ್ಶಿ ದಿನೇಶ್ ದೂರು ನೀಡಿದ್ದಾರೆ. ಈ ಸಂಬಂಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಹಿಂದೂ ಸಂಘಟನೆಯ ಕಾರ್ಯಕರ್ತರು ಒತ್ತಾಯಿಸಿದ್ದಾರೆ.

ಸದ್ಯ ಹರಿಹರ ಗ್ರಾಮಾಂತರ ಪೊಲೀಸರು ಪ್ರೊ. ಕೆ.ಎಸ್. ಭಗವಾನ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಅಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕಲಂ 196(1)(ಚ) ಮತ್ತು 299ರ ಅನ್ವಯ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.ಇನ್ನು ವಿಚಾರವಾಗಿ ಬಾಗಲಕೋಟೆಯಲ್ಲಿ ಮಾಜಿ ಸಂಸದ ವಿಎಸ್ ಉಗ್ರಪ್ಪ ಪ್ರತಿಕ್ರಿಯಿಸಿದ್ದು, ಭಗವಾನ್ ಅವರು ವಯಸ್ಸಿನ ಕಾರಣಕ್ಕೋ, ತಿಕ್ಕಲುತನವೂ ಗೊತ್ತಿಲ್ಲ. ಏನೇನೋ ಬಾಯಿಗೆ ಬಂದ ಹಾಗೆ ಮಾತನಾಡುತ್ತಾನೆ. ಅವರನ್ನು ನಾನು ಅನೇಕ ಸಾರಿ ಇಗ್ನೋರ್ ಮಾಡಬೇಕು ಅಂತಿದ್ದೆ. ಮಹರ್ಷಿ ವಾಲ್ಮೀಕಿ ರಾಮಾಯಣ ಬಗ್ಗೆ ಕೆಟ್ಟ ರೀತಿ ಮಾತಾಡಿದ್ದಾನೆ. ಇವರಿಗೆ ರಾಮಾಯಣದ ಬಗ್ಗೆ ಅರಿವು ಇಲ್ಲ. ಭಗವಾನ್ ಅಂತ್ ಹೆಸರು ಇಟ್ಟುಕೊಂಡು ಮನಸಾ ಇಚ್ಛೆ ಮಾತಾಡುತ್ತಾನೆ ಎಂದು ವಾಗ್ದಾಳಿ ಮಾಡಿದ್ದಾರೆ.

ಗಾಂಧೀಜಿ ಬಯಸಿದ್ದು ಗಾಂಧಿ ರಾಜ್ಯವಲ್ಲ, ರಾಮರಾಜ್ಯ. ಗಾಂಧಿಗಿಂತ ದೊಡ್ಡ ಮನುಷ್ಯನಾ ನೀನು? ಸೋ ಕಾಲ್ಡ್ ಇಂಟಲೆಕ್ಚುವಲ್ ಅಂತ ತೋರಿಸಿಕೊಳ್ಳುತ್ತಿರುವ ಭಗವಾನ್ ಈ ರೀತಿ ಮಾತಾಡಬಾರದು. ವಾಲ್ಮೀಕ್ ಸಮಾಜದ್ ಮೇಲೆ ಸಿಟ್ಟಿದ್ದರೆ ಈ್ ರೀತಿ ಮಾತನಾಡುವುದು ಶೋಭೆ ತರುವುದಿಲ್ಲ. ನಮ ಭಾವನೆಗೆ ಧಕ್ಕೆ ಮಾಡಿದ್ದೀರಿ ಈ ದೇಶದ ಜನರ ಬಳಿ ಕ್ಷಮೆ ಕೇಳಬೇಕು ಎಂದು ಉಗ್ರಪ್ಪ ಆಗ್ರಹಿಸಿದ್ದಾರೆ.

**ನಡೆದಿದ್ದೇನು? :** ಜೂನ್ 9 ರಂದು ಹರಿಹರದ ಪ್ರೊ. ಬಿ. ಕೃಷ್ಣಪ್ಪ ಮೈತ್ರಿವನ'ದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ್ದ ಪ್ರೊ. ಕೆ.ಎಸ್. ಭಗವಾನ್, ಶ್ರೀರಾಮನ ಜನನದ ಕುರಿತು ವಿವಾದಾತ್ಮಕ ಹೇಳಿಕೆ ನೀಡಿದ್ದರು. ನೀವು ಪೂಜೆ ಮಾಡುವ ಶ್ರೀರಾಮ ತನ್ನ ತಂದೆಗೆ ಹುಟ್ಟಿದವನಲ್ಲ. ರಾಜ ದಶರಥ ಪುತ್ರಕಾಮೇಷ್ಟಿ ಯಾಗ ಮಾಡಿದಾಗ, ರಾಣಿ ಪುರೋಹಿತರ ಜೊತೆ ರಾತ್ರಿ ಮಲಗಬೇಕಿತ್ತು. ರಾಣಿ ಪುರೋಹಿತರೊಂದಿಗೆ ರಾತ್ರಿ ಕಳೆದಿದ್ದಾಳೆ ಎಂದರೆ ಅರ್ಥ ಮಾಡಿಕೊಳ್ಳಿ, ನಿಮ್ಮ ದೇವರು ಅಪ್ಪನಿಗೆ ಹುಟ್ಟಿದ ಮಗ ಅಲ್ಲ. ಹೀಗೆ ವಿವಾದಾತ್ಮಕವಾಗಿ ಮಾತನಾಡಿದ್ದರು. ಇದು ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು.

### ಬಿಡದಿ ಟೌನ್‌ಶಿಪ್ ಸರ್ಕಾರದ ರಿಯಲ್ ಎಸ್ಟೇಟ್

# ಸಿಎಂ ಡಿಕೆಶಿ ರಿಯಲ್ ಎಸ್ಟೇಟ್ ದೊರೆ-ಕುಮಾರಸ್ವಾಮಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಮಂಡ್ಯ,ಜೂ.14-**ಬಿಡದಿ ಟೌನ್‌ಶಿಪ್ ಸರ್ಕಾರದ ರಿಯಲ್ ಎಸ್ಟೇಟ್. ಸಿಎಂ ಡಿ.ಕೆ. ಶಿವಕುಮಾರ್ ರಿಯಲ್ ಎಸ್ಟೇಟ್ ದೊರೆ. 3 ಎಕರೆ ಇದ್ದ ಡಿಕೆಶಿಯವರ ಪಿತ್ರಾರ್ಜಿತ ಆಸ್ತಿ 1400 ಕೋಟಿ ಹೇಗಾಯ್ತು? ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.ನಗರದಲ್ಲಿ ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್ ಶಿಪ್‌ಗೆ ಮೋದಿಯವರು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೋ, ಇಲ್ವೋ ನನಗೆ ಗೊತ್ತಿಲ್ಲ. ಮೋದಿಯವರು ಗುಜರಾತ್‌ನಲ್ಲಿ ಹಲವಾರು ಟೌನ್‌ಶಿಪ್‌ಗಳನ್ನು ಮಾಡಿದ್ದಾರೆ. ಅವರು ಟೌನ್‌ಶಿಪ್ ಮಾಡಿದ್ದ ಜಾಗ ಯಾವುದು?, ಇವ್ರು ಮಾಡ್ತಿರುವ ಜಾಗ ಯಾವ್ದು ಅದೇ ಪ್ರಶ್ನೆ?. ಟೌನ್‌ಶಿಪ್ ಮಾಡಲು ನನ್ನ ಅಭ್ಯಂತರ ಇಲ್ಲ. ಈ ಹಿಂದೆ ಆಋಐಇಕ ಎಂಬ ಪ್ರಾಧಿಕಾರ ರಚಿಸಿದ್ರು. ಆ ಪ್ರಾಧಿಕಾರಕ್ಕೆ ಡಿಕೆಶಿ ಅಧ್ಯಕ್ಷರಾಗಿದ್ರು, ಏನಾಯ್ತು ಅದು? ಎಂದು ಕೇಳಿದರು.

ಬೆಂಗಳೂರು -ಮೈಸೂರು ರಸ್ತೆಯಲ್ಲಿ 1.75 ಲಕ್ಷ ಎಕರೆ ಭೂಮಿಯನ್ನು ರಸ್ತೆಗೆ ಮತ್ತು ಟೌನ್‌ಶಿಪ್ ಮಾಡಲು ವಶಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಿದ್ರು. ಕಳೆದ 30 ವರ್ಷಗಳಲ್ಲಿ ಏನಾಯ್ತು ಆ ಪ್ರಾಜೆಕ್ಟ್?. ಕುಮಾರಸ್ವಾಮಿ ಕೂಸು ಎಂದು ಬಿಡದಿ ಟೌನ್‌ಶಿಪ್ ಮಾಡಲು ತರಾತುರಿಯಲ್ಲಿ ಹೊರಟಿದ್ದಾರೆ. ಅವತ್ತು ಇದೇ ಕಾಂಗ್ರೆಸ್ ಹೆಚ್.ಕೆ. ಪಾಟೀಲರ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ಎಂದು ಮಾಡಿಕೊಂಡಿದ್ರು. ಕುಮಾರಸ್ವಾಮಿ ಬೆಂಗಳೂರು ಸುತ್ತಮುತ್ತ ರೈತರ ಭೂಮಿ ಕಬಳಿಸಲು ಹೊರಟಿದ್ದಾರೆ ಎಂದು ಆರೋಪಿಸಿದ್ರು. ಅವತ್ತು ಮೂರು ಬಾರಿ ರೈತರನ್ನು ಕೃಷ್ಣಾ ಕಚೇರಿಗೆ ಕರೆಸಿ ಚರ್ಚಿಸಿದ್ದೆ. ಅಂದು ಆ ಭಾಗದ ರೈತರ ಭಾವನೆಗಳಿಗೆ ಸ್ಪಂದಿಸಿ ತೀರ್ಮಾನ ಮಾಡಿದ್ದೆ. ಮೊದಲೇ ಡಿಕೆಶಿ ರಿಯಲ್ ಎಸ್ಟೇಟ್ ದೊರೆ, ತರಾತುರಿಯಲ್ಲಿ ಟೌನ್‌ಶಿಪ್ ಮಾಡಲು ಹೊರಟಿದ್ದಾರೆ ಎಂದು ಅವರು ದೂರಿದರು.




1999ರಲ್ಲಿ ಪಿತ್ರಾರ್ಜಿತ ಆಸ್ತಿ 3 ಎಕರೆ ಎಂದು ಚುನಾವಣಾ ಆಯೋಗಕ್ಕೆ ಅಫಿಡವಿಟ್ ಸಲ್ಲಿಸಿದ್ದ ಡಿ.ಕೆ. ಶಿವಕುರ್ಮಾ. 2018ರಲ್ಲಿ 1400ಕೋಟಿ ಆಸ್ತಿ ಘೋಷಿಸಿದ್ದಾರೆ. 3 ಎಕರೆ ಇದ್ದವರ ಆಸ್ತಿ 1400ಕೋಟಿ ಆಸ್ತಿ ಹೇಗಾಯ್ತು?. ಜನಕ್ಕೂ ಇದರ ಬಗ್ಗೆ ಟ್ರೈನ್ ಅಪ್ ಮಾಡಲಿ. ಎರಡ್ಮೂರು ಎಕರೆ ಇಟ್ಟಿರುವ ರೈತರು ಅವ್ರಂತೆ ಶ್ರೀಮಂತರಾಗಲಿ ಎಂದು ಸಲಹೆ ನೀಡಲಿ ಎಂದರು.

ನರೇಂದ್ರ ಮೋದಿಯವರು ಉಪಯೋಗಕ್ಕೆ ಬಾರದ ಬರಡು ಭೂಮಿಯಲ್ಲಿ ಟೌನ್‌ಶಿಪ್ ಮಾಡಲು ಹೊರಟಿದ್ದು. ಇವರು ಮಾಡ್ತಿರುವ ಜಾಗದಲ್ಲಿ ಲಕ್ಷಾಂತರ ತೆಂಗು, ಅಡಿಕೆ ಬೆಳೆ ಬೆಳೆಯುತ್ತಾರೆ. ಟೌನ್‌ಶಿಪ್ ಮಾಡಪ್ಪ, ಎಲ್ಲಿ ರೈತರಿಗೆ ಉಪಯೋಗ ಬಾರದ ಭೂಮಿ ಇದೆಯೋ ಅಲ್ಲಿ ಮಾಡಿ. ಬಿಡದಿ ಬಳಿ ಉತ್ತಮ ನೀರಾವರಿ ಸೌಲಭ್ಯ ಇದೆ. ಪ್ರತಿ ತಿಂಗಳು ಹೈನುಗಾರಿಕೆಯಲ್ಲಿ 6 ಲಕ್ಷ ಲೀಟರ್ ಹಾಲು ಬೆಂಗಳೂರು ಡೈರಿಗೆ ಪೂರೈಕೆಯಾಗುತ್ತಿದೆ. ಇಂತಹ ಜಾಗದಲ್ಲಿ ಟೌನ್‌ಶಿಪ್ ಮಾಡಿ ಏನು ಸಾಧನೆ ಮಾಡ್ತೀರಾ?. ರೈತರ ಜಾಗವನ್ನು ವಶಪಡಿಸಿಕೊಳ್ಳುವುದಾಗಿ ಹೇಳಿ ಹುಡ್ಕೋ ಬ್ಯಾಂಕಿನಿಂದ 12 ಸಾವಿರ ಕೋಟಿ ಸಾಲ ತಂದಿದ್ದೀರಾ?. ರೈತರ ಹೆಸರಲ್ಲಿ ಸಾಲ ಪಡೆದಿದ್ದಾರೆ. ಆದರೆ ರೈತರಿಗೆ ಇನ್ನೂ ಒಂದು ರೂಪಾಯಿ ತಲುಪಿಲ್ಲ ಎಂದು ಕುಮಾರಸ್ವಾಮಿ ಹೇಳಿದರು.

ಪಿಪಿಪಿ ಮಾಡೆಲ್‌ನಲ್ಲಿ ಟೌನ್‌ಶಿಪ್ ಮಾಡಲು ಮುಂದಾಗಿದ್ದಾರೆ. ಡೆವಲಪ್‌ಮೆಂಟ್ ಸರ್ಕಾರ ಮಾಡಲ್ಲ, ರಿಯಲ್ ಎಸ್ಟೇಟ್ ಮಾಲೀಕನಿಗೆ ಕೊಡುತ್ತದೆ. ಅವನು ಕೊಟ್ಟ ಖರ್ಚಿನ ದುಡ್ಡು ಪಾವತಿಸಿ ಉಳಿದ ದುಡ್ಡು ರೈತರಿಗೆ ಹಂಚುತ್ತಾರೆ. ಕೆಲ ರೈತರು ಯೋಜನೆ ಪರ ಇರಬಹದು. ಆದ್ರೆ ವಿರೋಧ ಮಾಡುತ್ತಿರುವವರ ಸಂಖ್ಯೆ ಶೇ.80% ಇದೆ. ಸರ್ಕಾರವೇ ರಿಯಲ್ ಎಸ್ಟೇಟ್ ಏಜೆಂಟ್ ಆಗಿ ಕೆಲಸ ಮಾಡ್ತಿದೆ ಎಂದು ಹೆಚ್‌ಡಿಕೆ ಕಿಡಿಕಾರಿದರು.

ಗೃಹಲಕ್ಷ್ಮಿ, ಗೃಹಜ್ಯೋತಿ ಯೋಜನೆಗಳಲ್ಲಿ ಲೋಪದೋಷಗಳಿವೆ ಎಂದು ಸರ್ಕಾರವೇ ಹೇಳಿದೆ. ಮರು ಅರ್ಜಿ ಸ್ವೀಕಾರ ಒಳ್ಳೆಯ ಉದ್ದೇಶವೇ ಇರಬಹುದು, ಅದರ ನೆಪದಲ್ಲಿ ನಿಜವಾದ ಫಲಾನುಭವಿಗಳಿಗೆ ತೊಂದರೆ ಆಗಬಾರದು. ಮುಂದಿನ ದಿನಗಳಲ್ಲಿ ಆಗುವ ಅನಾಹುತಗಳನ್ನ ಯೋಚಿಸದೇ ಗ್ಯಾರಂಟಿ ಯೋಜನೆ ಘೋಷಿಸಿದ್ರು. ಈಗ ಅದರ ಹೊಡೆತಗಳಿಂದ ನ್ಯೂನತೆಗಳು ಗೊತ್ತಾಗಿವೆ. ಹಾಗಾಗಿ ಹೊಸದಾಗಿ ನೋಂದಣಿ ಮಾಡಿಕೊಳ್ಳಲು ಸರ್ಕಾರ ಮುಂದಾಗಿದೆ. ಎರಡು ತಿಂಗಳ ಗೃಹಲಕ್ಷ್ಮಿ ಹಣ ಬಾಕಿ ಬಗ್ಗೆ ಸರ್ಕಾರ ಚಕಾರ ಎತ್ತಿಲ್ಲ. ಎರಡು ತಿಂಗಳು ಕೊಡಬೇಕಾದ ಐದು ಸಾವಿರ ಕೋಟಿ ಲೆಕ್ಕದ ಬಗ್ಗೆ ಸರ್ಕಾರ ಜಾಣಮೌನಕ್ಕೆ ಜಾರಿದೆ. ಹೊಸ ಸಿಎಂ ಭ್ರಷ್ಟಾಚಾರ ಮುಕ್ತ ರಾಜ್ಯ ಮಾಡುವುದಾಗಿ ಹೇಳಿದ್ದಾರೆ. ಮೊದಲು ಐದು ಸಾವಿರ ಕೋಟಿ ರೂಪಾಯಿ ಏನಾಯ್ತು ಎಂದು ಜನತೆ ಮುಂದೆ ಹೇಳಿ?. ಹಿಂದಿನ್ ಮುಖ್ಯಮಂತ್ರಿಗಳು ಹೇಳಿಲ್ಲ, ಈಗಿನ ಸಿಎಂ ಆದ್ರೂ ಸತ್ಯಾಸತ್ಯತೆ ಹೇಳಲಿ ಎಂದು ಕುಮಾರಸ್ವಾಮಿ ಒತ್ತಾಯಿಸಿದರು.

ಕಚೇರಿ ಒಳಗೆ ಲಂಚ ತೆಗೆದುಕೊಳ್ಳಬೇಡಿ ಎಂದು ಸಿಎಂ ಹೇಳಿದ್ದಾರೆ ಅಂತ ಪತ್ರಿಕೆಯಲ್ಲಿ ಓದಿದೆ. ಕಚೇರಿ ಒಳಗೆ ದುಡ್ಡು ತೆಗೆದುಕೊಳ್ಳಬೇಡಿ, ಹೊರಗಡೆ ದುಡ್ಡು ತಗೋಳಿ ಅಂತಾನಾ ಅದರ ಅರ್ಥ?. ಈ ರೀತಿಯ ಬೆಳವಣಿಗೆಗಳು ಸಿಎಂ ಕಚೇರಿಯಿಂದಲೇ ನಡೆಯಲಿ. ಅಲ್ಲಿ ನಡೆಯುವ ಭ್ರಷ್ಟಾಚಾರದ ಬಗ್ಗೆ ಯಾರು ನೋಡ್ತಾರೆ, ಯಾರು ಜವಾಬ್ದಾರಿ? ಎಂದು ಅವರು ಪ್ರಶ್ನಿಸಿದರು.

# ಬಳ್ಳಾರಿ: ಮಹಿಳೆಗೆ ವಿಡಿಯೋ ಕಳಿಸಿ ಕಿರುಕುಳ ನೀಡುತ್ತಿದ್ದ ಯುವಕನ ಕೊಲೆ: ದಂಪತಿ, ಸಹೋದರ ಅರೆಸ್ಟ್

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,ಜೂ.14-**ರಾಜ್ಯವನ್ನೇ ತಲ್ಲಣಗೊಳಿಸಿದ್ದ ಚಿತ್ರದು ರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣವನ್ನು ಹೋಲು ವಂತಹ ಮತ್ತೊಂದು ಕೃತ್ಯ ಬೆಳಕಿಗೆ ಬಂದಿದೆ. ಮಹಿಳೆಗೆ ವಿಡಿಯೋ ಕಳಿಸಿ ತನ್ನ ಜೊತೆ ಸಹಕರಿಸುವಂತೆ ಒತ್ತಾಯಿಸಿ ಕಿರುಕುಳ ನೀಡುತ್ತಿದ್ದ ಯುವಕನನ್ನು ಸಂಬಂಧಿಕರೇ ಹಗ್ಗದಿಂದ ಕುತ್ತಿಗೆ ಬಿಗಿದು ಭೀಕರವಾಗಿ ಕೊಲೆ ಮಾಡಿರುವ ಪ್ರಕರಣ ಬಳ್ಳಾರಿಯಲ್ಲಿ ನಡೆದಿದೆ.

ಕೊಲೆಯಾದ ಯುವಕನನ್ನು ಖಾಸಗಿ ಲ್ಯಾಬ್‌ನಲ್ಲಿ ಕೆಲಸ ಮಾಡುತ್ತಿದ್ದ ಬಸವನಗೌಡ ಪಾಟೀಲ್ (26) ಅಂತ ಗುರುತಿಸಲಾಗಿದೆ. ಪ್ರಕರಣದಲ್ಲಿ ಆರೋಪಿಗಳಾದ ದೊಡ್ಡ ಬಸವನಗೌಡ, ಆತನ ಪತ್ನಿ ಶ್ವೇತಾ ಹಾಗೂ ಆಕೆಯ ಸಹೋದರ ವಿಜಯ್‌ನನ್ನು ಬಂಧಿಸಿ, ತನಿಖೆ ಮುಂದುವರೆಸಲಾಗಿದೆ.

ಘಟನೆ ವಿವರ: ಜೂನ್ 7ರಂದು ರಾತ್ರಿ ಬಸವನಗೌಡ ಇದ್ದಕ್ಕಿದ್ದಂತೆ ನಾಪತ್ತೆಯಾಗಿದ್ದು, ಮರುದಿನ ಬೆಳಗ್ಗೆ ಮೋಕಾ ಪೊಲೀಸ್ ಠಾಣಾ ವ್ಯಾಪ್ತಿಯ ಶಿವಪುರ-ತಂಬ್ರಹಳ್ಳಿ ಎಲ್‌ಎಲ್‌ಸಿ ಕಾಲುವೆಯ ಪಕ್ಕದಲ್ಲಿ ಅರೆಬೆಂದ ಸ್ಥಿತಿಯಲ್ಲಿ ಶವವಾಗಿ ಪತ್ತೆಯಾಗಿದ್ದ. ಆರಂಭದಲ್ಲಿ ಇದೊಂದು ಪ್ರೇಮ ಪ್ರಕರಣಕ್ಕೆ ಸಂಬಂಧಿಸಿದ ಕೊಲೆ ಇರಬಹುದು ಎಂದು ಶಂಕಿಸಲಾಗಿತ್ತು. ಆದರೆ ಪೊಲೀಸರು ತನಿಖೆ ತೀವ್ರಗೊಳಿಸಿದಾಗ ಸತ್ಯ ಹೊರಬಂದಿದ್ದು, ಜಿಲ್ಲೆಯ ಜನರನ್ನು ಬೆಚ್ಚಿಬೀಳಿಸಿದೆ.




ಪೊಲೀಸರ ತನಿಖೆಯ ಪ್ರಕಾರ, ಮೃತ ಬಸವನಗೌಡ ವಿವಾಹಿತ ಮಹಿಳೆ ಶ್ವೇತಾಗೆ ಕಳೆದ ಒಂದು ವರ್ಷದಿಂದ ನಿರಂತರವಾಗಿ ಅಶ್ಲೀಲ ವಿಡಿಯೋಗಳನ್ನು ಕಳುಹಿಸಿ, ತನ್ನ ಜೊತೆ ಸಹಕರಿಸುವಂತೆ ಮಾನಸಿಕ ಕಿರುಕುಳ ನೀಡಿ ನಿರಂತರವಾಗಿ ಪೀಡಿಸುತ್ತಿದ್ದ.

ಬಸವನಗೌಡನ ವರ್ತನೆಯಿಂದ ಬೇಸತ್ತ ಮಹಿಳೆ, ಈ ವಿಷಯವನ್ನು ತನ್ನ ಪತಿ ದೊಡ್ಡ ಬಸವನ ಗೌಡ ಮತ್ತು ಸಹೋದರ ವಿಜಯ್‌ಗೆ ತಿಳಿಸಿದ್ದಾಳೆ. ಇದರಿಂದ ಯುವಕನನ್ನು ಕೊಲೆ ಮಾಡಲು ಮೂವರೂ ಸೇರಿ ಪ್ಲಾನ್ ಮಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಬೆಂಗಳೂರಿಗೆ ಪರಾರಿ: ಯೋಜನೆಯಂತೆ ಜೂನ್ 7ರಂದು ಮಹಿಳೆಯಿಂದಲೇ ಬಸವನಗೌಡನನ್ನು ಮೋಕಾ ಸಮೀಪದ ನಿರ್ಜನ ಪ್ರದೇಶಕ್ಕೆ ಕರೆಸಿಕೊಳ್ಳಲಾಗಿತ್ತು. ಬಸವನಗೌಡ ಅಲ್ಲಿಗೆ ಬರುತ್ತಿದ್ದಂತೆ ಮೊದಲೇ ಹೊಂಚು ಹಾಕಿ ಕಾದಿದ್ದ ಮಹಿಳೆಯ ಪತಿ ದೊಡ್ಡ ಬಸವನಗೌಡ ಮತ್ತು ಆಕೆಯ ಸಹೋದರ ವಿಜಯ್ ಇಬ್ಬರೂ ಸೇರಿ ಹಗ್ಗದಿಂದ ಕುತ್ತಿಗೆ ಬಿಗಿದು ಆತನನ್ನು ಬರ್ಬರವಾಗಿ ಕೊಲೆ ಮಾಡಿದ್ದಾರೆ. ಬಳಿಕ ಶವ ಸಿಗಬಾರದೆಂದು ಅಲ್ಲಿಂದ ಸುಮಾರು 10 ಕಿಲೋಮೀಟರ್ ದೂರದ ನಿರ್ಜನ ಪ್ರದೇಶಕ್ಕೆ ಸಾಗಿಸಿ, ಬೆಂಕಿ ಹಚ್ಚಿ ಸುಟ್ಟು ಸಾಕ್ಷ್ಯ ನಾಶಪಡಿಸಲು ಯತ್ನಿಸಿದ್ದಾರೆ. ಕೃತ್ಯದ ಬಳಿಕ ಮೂವರೂ ಬೆಂಗಳೂರಿಗೆ ಓಡಿಹೋಗಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಮೃತ ಬಸವನಗೌಡ ಮೊಬೈಲ್ ಪರಿಶೀಲಿಸಿದಾಗ ಆತ ಹಲವು ಮಹಿಳೆಯರಿಗೆ ಅಸಭ್ಯ ಸಂದೇಶ ಕಳುಹಿಸಿರುವುದು ಪತ್ತೆಯಾಗಿದೆ. ನಿರಂತರವಾಗಿ ಯಾರಿಗೆ ಸಂದೇಶ ಹೋಗಿತ್ತು ಎಂಬುದನ್ನು ಟ್ರ್ಯಾಕ್ ಮಾಡಿ, ಮೊಬೈಲ್ ಲೊಕೇಶನ್ ಮತ್ತು ಕಾಲ್ ಮಾಹಿತಿ ಆಧಾರದ ಮೇಲೆ ಆರೋಪಿಗಳನ್ನು ಬಂಧಿಸಲಾಗಿದೆ. ತನಿಖೆ ವೇಳೆ ಆರೋಪಿಗಳು ತಾವೇ ಕೃತ್ಯ ಎಸಗಿರುವುದನ್ನು ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

ಎಸ್‌ಪಿ ಮಾಹಿತಿ: ಈ ಬಗ್ಗೆ ಮಾಹಿತಿ ನೀಡಿದ ಬಳ್ಳಾರಿ ಎಸ್‌ಪಿ ಸುಮನ್ ಡಿ. ಪೆನ್ನೇಕರ್, ಕೊಲೆಯಾದ ಯುವಕ ಮಹಿಳೆಗೆ ವಿಡಿಯೋ ಕಳಿಸಿ ತನ್ನ ಜೊತೆ ಸಹಕರಿಸುವಂತೆ ಒತ್ತಾಯಿಸಿ ಕಿರುಕುಳ ನೀಡುತ್ತಿದ್ದ.

ಮಹಿಳೆ ಈ ವಿಚಾರವನ್ನು ತನ್ನ ಗಂಡ ಹಾಗೂ ಸಹೋದರನಿಗೆ ತಿಳಿಸಿದ್ದಳು. ಕಿರುಕುಳ ಮುಂದುವರೆದಾಗ ಆತನನ್ನು ಕೊಲೆ ಮಾಡಲು ಯೋಜನೆ ರೂಪಿಸಿದ್ದರು. ಅದರಂತೆ ಮಹಿಳೆಯಿಂದಲೇ ಕರೆ ಮಾಡಿಸಿ ಶಿವಪುರ-ತಂಬ್ರಹಳ್ಳಿ ಕಾಲುವೆ ಬಳಿ ಯುವಕನನ್ನು ಕರೆಯಿಸಿಕೊಂಡು, ಹಗ್ಗದಿಂದ ಕೊಲೆ ಮಾಡಿದ್ದಾರೆ. ಕಾರಿನಲ್ಲಿ ಹಗ್ಗ ಹಾಗೂ ಪೆಟ್ರೋಲ್ ತಂದಿದ್ದರು. ಯುವಕನನ್ನು ಕೊಲೆ ಮಾಡಿ, ಪೆಟ್ರೋಲ್ ಸುರಿದು ಸುಟ್ಟು ಹಾಕಿ ಸಾಕ್ಷ್ಯ ನಾಶ ಮಾಡಲು ಯತ್ನಿಸಿದ್ದಾರೆ.

# ಬಿಡದಿ ಟೌನ್‌ಶಿಪ್ ವಿರೋಧಿಸಿ ಜೂ.21ರಂದು ಜೆಡಿಎಸ್‌ನಿಂದ ಬೃಹತ್ ಪಾದಯಾತ್ರೆ: ನಿಖಿಲ್

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಮನಗರ,ಜೂ.14-**ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್ ಪಕ್ಷವು ಜೂನ್ 21ರಂದು ಯೋಜನೆಯ ವ್ಯಾಪ್ತಿಯ 26 ಹಳ್ಳಿಗಳಲ್ಲಿ ಬೃಹತ್ ಪಾದಯಾತ್ರೆ ಹಮ್ಮಿಕೊಂಡಿದೆ. ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಸಂತ್ರಸ್ತ ರೈತರೊಂದಿಗೆ ಪಾದಯಾತ್ರೆ ನಡೆಯಲಿದೆ.

ಇಂದು ಬಿಡದಿಯ ಅರಳಾಳುಸಂದ್ರದಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಮುಂದಿನ ಹೋರಾಟದ ರೂಪುರೇಷೆಗಳ ಬಗ್ಗೆ ಮಾಹಿತಿ ನೀಡಿದರು. ಬಿಡದಿ ಟೌನ್‌ಶಿಪ್ (ಎಆಈಅ) ಹೆಸರಿನಲ್ಲಿ ಸರ್ಕಾರ ನಡೆಸುತ್ತಿರುವ ಅನ್ಯಾಯದ ಭೂಸ್ವಾಧೀನದ ವಿರುದ್ಧ ನಮ್ಮ ಹೋರಾಟ ಈಗ ಬೀದಿಗೆ ಬಂದಿದೆ. ಇದೊಂದು ಸರ್ಕಾರಿ ರಿಯಲ್ ಎಸ್ಟೇಟ್ ಯೋಜನೆಯಾಗಿದೆ. ಸಂಪೂರ್ಣವಾಗಿ ಹಣ ಲೂಟಿ ಮಾಡುವ ಯೋಚನೆಯಾಗಿದೆ ಎಂದು ಆರೋಪಿಸಿದರು.

ಪಾದಯಾತ್ರೆ ಯಶಸ್ವಿಗೊಳಿಸಿ: ಸರ್ಕಾರದ ಖಜಾನೆಯಲ್ಲಿ ಹಣವಿಲ್ಲದಿದ್ದರೂ, ಆರ್ಥಿಕ ಇಲಾಖೆಯ ವರದಿಯನ್ನು ಗಾಳಿಗೆ ತೂರಿ ಶೇ.87ರಷ್ಟು ಸಾಲ ಪಡೆದು ಈ ಯೋಜನೆ ಮಾಡಲು ಹೊರಟಿರುವುದು ಯಾರ ಹಿತಾಸಕ್ತಿಗಾಗಿ? ಹೈನುಗಾರಿಕೆ, ರೇಷ್ಮೆ, ಕೃಷಿ ನಂಬಿ ಬದುಕುತ್ತಿರುವ ರೈತರನ್ನು ಬೀದಿಗೆ ತಳ್ಳಲು ಹೊರಟಿರುವ ಸರ್ಕಾರದ ವಿರುದ್ಧ ನಮ್ಮ ಹೋರಾಟ ನಿರಂತರವಾಗಿರಲಿದೆ. ಈ ಯೋಜನೆಯನ್ನು ತಕ್ಷಣ ಕೈಬಿಡಲು ಒತ್ತಾಯಿಸಿ, ಬರುವ ಜೂನ್ 21ರಂದು ನಡೆಯಲಿರುವ ಬೃಹತ್ ಪಾದಯಾತ್ರೆಯಲ್ಲಿ ಹೆಚ್ಚಿನ ರೈತ ಬಾಂಧವರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ವಿನಂತಿಸಿದರು.



ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರೂ ಯೋಜನೆಯನ್ನು ತೀವ್ರ ಖಂಡಿಸಿದ್ದಾರೆ. ಬಿಡದಿ ಟೌನ್‌ಶಿಪ್ ನಾಡಿನ ಹಿತಾಸಕ್ತಿ ಅಡಗಿಲ್ಲ. ಭೂ ಮಾಫಿಯಾ ಹಾಗೂ ಭೂ ಲೂಟಿಕೋರರಿಗೆ ಲಾಭ ಮಾಡಿಕೊಡಲು ಇದನ್ನು ರೂಪಿಸಲಾಗಿದೆ. ಬೆಂಗಳೂರು ಅಭಿವೃದ್ಧಿಗೆ ಎಳ್ಳಷ್ಟು ಉಪಯೋಗ ಆಗದ ಈ ಯೋಜನೆಯನ್ನು ತಮ್ಮ ಸ್ವಾರ್ಥಕ್ಕಾಗಿ, ರಿಯಲ್ ಎಸ್ಟೇಟ್ ಮಾಫಿಯಾದೊಂದಿಗೆ ಕೈಜೋಡಿಸಿ ರೈತರ ಭೂಮಿಯನ್ನು ಲೂಟಿ ಹೊಡೆಯಲು ಹೊರಟಿದ್ದಾರೆ. ಈ ಹಿನ್ನೆಲೆಯಲ್ಲಿ ನಮ್ಮ ಪಕ್ಷ ರೈತರ ಪರವಾಗಿ ನಿಲ್ಲುತ್ತದೆ. ಅವರ ಜತೆ ನಿಂತು ಕಾನೂನು ಹೋರಾಟ ನಡೆಸುತ್ತದೆ ಎಂದರು.


ರೈತರನ್ನು ಹತ್ತಿಕ್ಕುವ ಕೆಲಸ: ಈ ಯೋಜನೆ ಕುಮಾರಸ್ವಾಮಿ ಅವರ ಕೂಸು ಎಂದು ಮುಖ್ಯಮಂತ್ರಿ ಸೇರಿದಂತೆ ಇನ್ನೂ ಕೆಲವರು ಹೇಳುತ್ತಿದ್ದಾರೆ. ನಾವು ಚಿಂತನೆ ಮಾಡಿದ್ದು 2006ರಲ್ಲಿ, ಈಗ ನಾವು ಇರುವುದು 2026. 20 ವರ್ಷಗಳಲ್ಲಿ ಎಷ್ಟು ಬದಲಾವಣೆಯಾಗಿದೆ, ಎಷ್ಟೊಂದು ಅಭಿವೃದ್ಧಿಯಾಗಿದೆ. ಇಷ್ಟು ವರ್ಷಗಳಲ್ಲಿ ಏನೆಲ್ಲಾ ಆಯಿತು ಎನ್ನುವುದನ್ನು ಈ ಸರ್ಕಾರ ಅರ್ಥ ಮಾಡಿಕೊಳ್ಳಬೇಕು. ಯಾವುದೇ ಯೋಜನೆ ಕೈಗೊಳ್ಳುವ ಮೊದಲು ರೈತರ ಒಪ್ಪಿಗೆ ಪಡೆಯಬೇಕು. ಅದನ್ನು ಮಾಡದೇ ಈ ಸರ್ಕಾರ ಸರ್ವಾಧಿಕಾರಿ ಮನೋಭಾವದಿಂದ ರೈತರನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿಗೆ ಟೌನ್‌ಶಿಪ್ ವಿಷಯದಲ್ಲಿ ರಾಜಕೀಯ ಮಾಡುವ ಉದ್ದೇಶ ಇಲ್ಲ. 2006ರಲ್ಲಿ ಐದು ಟೌನ್‌ಶಿಪ್‌ಗಳನ್ನು ಮಾಡಲು ಹೊರಟಾಗ ಇತ್ತೀಚಿನ ದಿನಗಳವರೆಗೂ ಕಾನೂನು ಮಂತ್ರಿ ಆಗಿದ್ದ ಹೆಚ್.ಕೆ. ಪಾಟೀಲ್ ಅಧ್ಯಕ್ಷತೆಯಲ್ಲಿ ಸತ್ಯಶೋಧನಾ ಸಮಿತಿ ರಚನೆ ಮಾಡಿ ಐದೂ ಸ್ಥಳಗಳಲ್ಲಿ ಸತ್ಯಶೋಧನೆ ಮಾಡಿದ್ದರಲ್ಲಾ. ಆ ಸತ್ಯಶೋಧನಾ ವರದಿ ಎಲ್ಲಿ ಹೋಯಿತು? ಅದನ್ನು ಜನರ ಮುಂದೆ ಇಡಿ. ಯಾವ ಉದ್ದೇಶಕ್ಕೆ ಅಂದು ಈ ಯೋಜನೆಯನ್ನು ಕಾಂಗ್ರೆಸ್ ಪಕ್ಷದ ನಾಯಕರು ವಿರೋಧ ಮಾಡಿದರು ಎಂಬುದನ್ನು ಸಾರ್ವಜನಿಕವಾಗಿ ಜನರ ಮುಂದೆ ಹೇಳಲಿ ಎಂದು ಅವರು ಒತ್ತಾಯಿಸಿದರು. ಬಿಡದಿ ಭಾಗದ ರೈತರೊಂದಿಗೆ ನಾವಿದ್ದೇವೆ: ಕಾನೂನಿನಲ್ಲಿ ಏನು ಹೋರಾಟ ಮಾಡಬೇಕೋ ಮಾಡುತ್ತೇವೆ. ರೈತರಿಗೆ ನ್ಯಾಯ ಕೊಡಿಸಲಿದ್ದೇವೆ. ರೈತರ ಪರ ನಿಲ್ಲುವುದು ಜನಪ್ರತಿನಿಧಿಗಳ ಕರ್ತವ್ಯ. ಆ ಕೆಲಸವನ್ನು ನಾವು ಮಾಡುತ್ತೇವೆ. ಯಾವುದೇ ಕಾರಣಕ್ಕೂ ರೈತರ ಭೂಮಿ ಕೊಳ್ಳೆ ಹೊಡೆಯಲು ಬಿಡುವುದಿಲ್ಲ. ನಾವು ಈ ಭಾಗದ ರೈತರೊಂದಿಗೆ ಇದ್ದೇವೆ. ಈ ಭಾಗದ ರೈತರೊಂದಿಗೆ ಪಾದಯಾತ್ರೆಗೆ ನಾವು ಸದಾ ಇರುತ್ತೇವೆ ಎಂದರು.

### ಘನತ್ಯಾಜ್ಯ ಟೆಂಡರ್ ಅಕ್ರಮ ಆರೋಪ

# ಒತ್ತಡಕ್ಕೆ ಮಣಿಯದೇ ಆತ್ಮಸಾಕ್ಷಿಗೆ ಅನುಗುಣವಾಗಿ ವರದಿ ನೀಡಿ: ಉನ್ನತ ಮಟ್ಟದ ಸಮಿತಿಗೆ ಆರ್.ಅಶೋಕ್ ಪತ್ರ

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,ಜೂ.14-**₹39,437 ಕೋಟಿ ಮೊತ್ತದ ಘನತ್ಯಾಜ್ಯ ನಿರ್ವಹಣಾ ಟೆಂಡರ್ ಕುರಿತು ಪರಿಶೀಲನೆ ನಡೆಸುತ್ತಿರುವ ಉನ್ನತ ಮಟ್ಟದ ಸಮಿತಿಗೆ ಪತ್ರ ಬರೆದಿರುವ ವಿಪಕ್ಷ ನಾಯಕ ಆರ್. ಅಶೋಕ್, ಯಾವು ದೇ ರಾಜಕೀಯ, ಆಡಳಿತಾತ್ಮಕ ಅಥವಾ ಬಾಹ್ಯ ಒತ್ತಡಗಳಿಗೆ ಮಣಿಯದೆ, ಆತ್ಮಸಾಕ್ಷಿ ಮತ್ತು ಸಾರ್ವಜನಿಕ ಹಿತಾಸಕ್ತಿಗೆ ಅನುಗುಣವಾಗಿ ವರದಿ ಸಲ್ಲಿಸಿ ಎಂದು ಕೋರಿದ್ದಾರೆ.



ಪತ್ರದಲ್ಲಿ ಇದು ಕೇವಲ ಒಂದು ಟೆಂಡರ್ ವಿಚಾರವಲ್ಲ; ಬೆಂಗಳೂರಿನ ಭವಿಷ್ಯ, ತೆರಿಗೆದಾರರ ಹಣ ಮತ್ತು ಸಾರ್ವಜನಿಕ ವಿಶ್ವಾಸದ ಪ್ರಶ್ನೆಯಾಗಿದೆ. ಸತ್ಯ, ಪಾರದರ್ಶಕತೆ ಮತ್ತು ಜನಹಿತದ ಪರವಾಗಿ ನಿಲ್ಲುವುದು ಸಮಿತಿಯ ಜವಾಬ್ದಾರಿ. ಯಾವುದೇ ಪ್ರಭಾವ, ಒತ್ತಡ ಅಥವಾ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡದೆ ವಾಸ್ತವಾಂಶಗಳ ಆಧಾರದ ಮೇಲೆ ವರದಿ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ರಾಜ್ಯದ ಹಣಕಾಸು ಇಲಾಖೆಯೇ ಈ ಟೆಂಡ್ರ್ ಕುರಿತು ಗಂಭೀರ ಆಕ್ಷೇಪಣೆಗಳನ್ನು ದಾಖಲಿಸಿದೆ. ಯೋಜನೆಯ ವೆಚ್ಚ, ವಾರ್ಷಿಕ ದರ ಏರಿಕೆ, 30 ವರ್ಷಗಳ ಸುದೀರ್ಘ ಅವಧಿಯ ಒಪ್ಪಂದ ಹಾಗೂ ಏಕಸ್ವಾಮ್ಯಕ್ಕೆ ಅವಕಾಶ ಕಲ್ಪಿಸುವ ವೆಂಡರ್ ಲಾಕ್-ಇನ್ ಅಪಾಯಗಳ ಬಗ್ಗೆ ಸರ್ಕಾರದ ಸ್ವಂತ ಹಣಕಾಸು ಇಲಾಖೆ ಎಚ್ಚರಿಕೆ ನೀಡಿದೆ. ಹಣಕಾಸು ಇಲಾಖೆಯ ಅಭಿಪ್ರಾಯದ ಪ್ರಕಾರ, ವರ್ಷಕ್ಕೆ 5% ದರ ಏರಿಕೆ ಮುಂದುವರಿದರೆ ಮುಂದಿನ 30 ವರ್ಷಗಳಲ್ಲಿ ಈ ಯೋಜನೆಯ ವೆಚ್ಚ ಹಲವು ಪಟ್ಟು ಹೆಚ್ಚಾಗುವ ಸಾಧ್ಯತೆಯಿದೆ.

ಇದರ ಅಂತಿಮ ಹೊರೆ ಬೀಳುವುದು ಸರ್ಕಾರದ ಮೇಲೆ ಅಲ್ಲ, ಬೆಂಗಳೂರಿನ ತೆರಿಗೆದಾರ ನಾಗರಿಕರ ಮೇಲೆ ಎಂದು ಪ್ರತಿಪಕ್ಷ ನಾಯಕ ವಿವರಿಸಿದ್ದಾರೆ. ಈಗಾಗಲೇ ಬೆಂಗಳೂರು ನಗರದ ಜನರು ಆಸ್ತಿ ತೆರಿಗೆ, ವಿವಿಧ ಸೆಸ್‌ಗಳು, ಬಳಕೆದಾರರ ಶುಲ್ಕಗಳು ಹಾಗೂ ಇತರೆ ತೆರಿಗೆಗಳ ಭಾರವನ್ನು ಹೊರುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಸಾರ್ವಜನಿಕ ಹಣದ ಸಾವಿರಾರು ಕೋಟಿ ರೂಪಾಯಿಗಳ ಬಳಕೆಯ ಬಗ್ಗೆ ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವೂ ಅತ್ಯಂತ ಜವಾಬ್ದಾರಿಯುತವಾಗಿರಬೇಕು. ನಿಮ್ಮ ಸಮಿತಿಯ ವರದಿ ಕೇವಲ ಸರ್ಕಾರಕ್ಕೆ ಸಲ್ಲಿಸುವ ಒಂದು ದಾಖಲೆಯಾಗಿರುವುದಿಲ್ಲ; ಅದು ಮುಂದಿನ ಪೀಳಿಗೆಗಳ ಮೇಲೂ ಪರಿಣಾಮ ಬೀರುವ ನಿರ್ಧಾರದ ಅಡಿಪಾಯವಾಗಲಿದೆ. ವರದಿಯಲ್ಲಿ ನೀವು ಬರೆಯುವ ಪ್ರತಿಯೊಂದು ಪದವೂ ಸಾರ್ವಜನಿಕ ವಲಯದಲ್ಲಿ ಮಾಧ್ಯಮಗಳಲ್ಲಿ ತೀವ್ರ ವಿಮರ್ಶೆಗೊಳಗಾಗಲಿದೆ. ಆದ್ದರಿಂದ ಯಾವುದೇ ರಾಜಕೀಯ, ಆಡಳಿತಾತ್ಮಕ ಅಥವಾ ಇತರೆ ಒತ್ತಡಗಳಿಗೆ ಮಣಿಯದೆ, ನಿಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ, ಸಾರ್ವಜನಿಕ ಹಿತಾಸಕ್ತಿಯನ್ನು ಮಾತ್ರ ಮಾನದಂಡವನ್ನಾಗಿಸಿಕೊಂಡು ಸಂಪೂರ್ಣ ಪಾರದರ್ಶಕ, ಪ್ರಾಮಾಣಿಕ ಹಾಗೂ ನಿರ್ಭೀತ ವರದಿಯನ್ನು ಸಲ್ಲಿಸುವಂತೆ ನಿಮ್ಮಲ್ಲಿ ವಿನಂತಿಸುತ್ತೇನೆ ಎಂದು ಅವರು ಕೋರಿದ್ದಾರೆ.

ಸರ್ಕಾರಕ್ಕೆ ವರದಿ ಸಲ್ಲಿಸುವುದು ತಮಗೆ ಒಂದು ಕರ್ತವ್ಯವಾಗಿರಬಹುದು. ಆದರೆ ಬೆಂಗಳೂರಿನ ಜನತೆಗೆ ಮತ್ತು ನಿಮ್ಮ ಆತ್ಮಸಾಕ್ಷಿಗೆ ಉತ್ತರ ನೀಡುವುದು ಅದಕ್ಕಿಂತ ದೊಡ್ಡ ಜವಾಬ್ದಾರಿಯಾಗಿದೆ. ನಾಳೆ ಈ ನಗರದ ನಾಗರಿಕರು, ತೆರಿಗೆದಾರರು ಮತ್ತು ಮುಂದಿನ ಪೀಳಿಗೆಗಳು ಹಿಂದಿರುಗಿ ನೋಡಿದಾಗ,

ಈ ಸಮಿತಿಯ ಸದಸ್ಯರು ಕೇವಲ ಒಂದು ನಿರ್ಧಾರಕ್ಕೆ ಮುದ್ರೆ ಒತ್ತಲಿಲ್ಲ; ಬೆಂಗಳೂರಿನ ಹಿತಾಸಕ್ತಿಯನ್ನು ಕಾಪಾಡುವ ತಮ್ಮ ಗುರುತರ ಕರ್ತವ್ಯವನ್ನು ನಿಭಾಯಿಸಿದರು ಎಂಬ ಹೆಗ್ಗಳಿಕೆ ನಿಮಗೆ ಸಲ್ಲಲಿ ಎಂಬುದು ನನ್ನ ಆಶಯ ಎಂದು ಆರ್. ಅಶೋಕ್ ಹೇಳಿದ್ದಾರೆ.

ಬೆಂಗಳೂರು ನಗರದ ಜನರ ಹಿತಾಸಕ್ತಿಯನ್ನು ಕಾಪಾಡುವ ಐತಿಹಾಸಿಕ ಅವಕಾಶ ಇಂದು ನಿಮ್ಮ ಮುಂದಿದೆ. ನಿಮ್ಮ ವರದಿ ಸರ್ಕಾರದ ನಿರ್ಧಾರವನ್ನು ಮಾತ್ರವಲ್ಲ, ಬೆಂಗಳೂರಿನ ಭವಿಷ್ಯವನ್ನೂ ರೂಪಿಸಲಿದೆ. ಆ ಜವಾಬ್ದಾರಿಯನ್ನು ನ್ಯಾಯಯುತವಾಗಿ ನಿರ್ವಹಿಸುವಿರಿ ಎಂಬ ದೃಢ ವಿಶ್ವಾಸ ನನ್ನದು. ನೆನಪಿರಲಿ, ಕರ್ನಾಟಕದ ಜನತೆ ಎಲ್ಲವನ್ನೂ ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

# ಬೆಂಗಳೂರಲ್ಲಿ ಧಾರಾಕಾರ ಮಳೆ: ಕೆರೆಯಂತಾದ ರಸ್ತೆಗಳು, ವಾಹನ ಸವಾರರ ಪರದಾಟ..!

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು, ಜೂ.14-**ನಗರದಲ್ಲಿ ಕಳೆದೆರಡು ದಿನಗಳಿಂದ ಮಳೆ (ಚಿಜ್ಞಿ) ಚುರುಕುಗೊಂಡಿದೆ. ನಿನ್ನೆ ಸಂಜೆಯೂ ಮಳೆ ದರ್ಶನವಾಗಿದ್ದು, ಇಂದು ಮತ್ತೆ ಮಳೆ ಎಂಟ್ರಿಕೊಟ್ಟಿದೆ. ಎಲ್ಲೆಡೆ ಮೋಡ ಕವಿದ ವಾತಾವರಣವಿದ್ದು, ಸಂಜೆ ಆಗುತ್ತಿದ್ದಂತೆ ನಗರದ ಹಲವೆಡೆ ಗುಡುಗು ಸಹಿತ ಧಾರಾಕಾರ ಮಳೆ ಆರಂಭವಾಗಿದೆ. ಮಳೆಯಿಂದಾಗಿ ನಗರದ ಪ್ರಮುಖ ರಸ್ತೆಗಳು ಕೆರೆಯಂತಾಗಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ಪರದಾಡಿದ್ದಾರೆ. ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಸಂಜೆ ಆಗುತ್ತಿದ್ದಂತೆ ವರುಣನ ಆರ್ಭಟ ಶುರುವಾಗಿದೆ. ನಗರದ ಮೆಜೆಸ್ಟಿಕ್, ಟೌನ್ ಹಾಲ್, ಶೇಷಾದ್ರಿಪುರಂ, ಮಲ್ಲೇಶ್ವರಂ, ಶಿವಾಜಿನಗರ, ಫ್ರೀಡಂಪಾರ್ಕ್, ಗಾಂಧಿನಗರ, ಚಾಮರಾಜಪೇಟೆ, ಕಾರ್ಪೊರೇಷನ್, ಚಿಕ್ಕಪೇಟೆ, ರಾಜಾಜಿನಗರ, ವಿಜಯನಗರ, ಶಾಂತಿನಗರ ಹಾಗೂ ಮಡಿವಾಳ ಸೇರಿದಂತೆ ಹಲವೆಡೆ ಬಿರುಗಾಳಿ ಸಹಿತ ಭಾರೀ ಮಳೆಯಾಗುತ್ತಿದೆ.

ಮಧ್ಯಾಹ್ನವಿದ್ದ ಜಿಟಿ ಜಿಟಿ ಮಳೆ, ಸಂಜೆ ಆಗುತ್ತಿದ್ದಂತೆ ಬಿರುಸು ಪಡೆದುಕೊಂಡಿದ್ದು ಮಹಾನಗರವನ್ನು ಮತ್ತಷ್ಟು ಕೂಲ್ ಮಾಡಿದೆ. ಆದರೆ, ಈ ದಿಢೀರ್ ಮಳೆಯಿಂದಾಗಿ ಕಚೇರಿ ಮುಗಿಸಿ ಮನೆಗೆ ಮರಳುತ್ತಿದ್ದ ಸಾರ್ವಜನಿಕರು ಹಾಗೂ ರಸ್ತೆ ಬದಿಯ ವ್ಯಾಪಾರಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ. ಇನ್ನು ಧಾರಾಕಾರ ಮಳೆ ಹಿನ್ನೆಲೆ ನಗರದ ಪ್ರಮುಖ ರಸ್ತೆಗಳು ಕೆರೆಯಂತಾಗಿವೆ. ರಸ್ತೆಗಳ ಮೇಲೆ ಮೊಣಕಾಲುದ್ದ ನೀರು ನಿಂತಿರುವುದರಿಂದ ವಾಹನ ಸವಾರರು ಸಂಚರಿಸಲು ಹರಸಾಹಸ ಪಡುತ್ತಿದ್ದಾರೆ. ದಿಢೀರ್ ಮಳೆಗೆ ಸಿಲುಕಿದ ನೂರಾರು ಸಾರ್ವಜನಿಕರು ಮತ್ತು ದ್ವಿಚಕ್ರ ವಾಹನ ಸವಾರರು ಕೆ.ಆರ್. ಮಾರ್ಕೆಟ್ ಫ್ಲೈಓವರ್ ಕೆಳಗೆ ನಿಂತು ಆಶ್ರಯ ಪಡೆದರು. ಜನಸಾಮಾನ್ಯರು ಛತ್ರಿ ಹಿಡಿದು ಮಳೆಯಲ್ಲೇ ಹೋಗುತ್ತಿರುವ ದೃಶ್ಯಗಳು ಕಂಡುಬಂದಿವೆ. ಮಳೆಯಿಂದಾಗಿ ಕೆಲವೆಡೆ ಟ್ರಾಫಿಕ್ ಜಾಮ್ ಕೂಡ ಉಂಟಾಗಿದೆ.


# ಮತದಾರರ ಪಟ್ಟಿ ಶುದ್ಧೀಕರಣಕ್ಕೆ ಕೈಜೋಡಿಸಿ ಕಾರ್ಯಕರ್ತರಿಗೆ ಶಾಸಕ ಪ್ರಭು ಚವ್ಹಾಣ ಕರೆ

ಕನ್ನಡ ಮಾತೃ ಭೂಮಿ ವಾರ್ತೆ

**ಔರಾದ(ಬಿ), ಜೂ 14** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಅಭಿಯಾನವನ್ನು ಯಶಸ್ವಿಗೊಳಿಸಲು ಬಿಜೆಪಿ ಕಾರ್ಯಕರ್ತರು ಗ್ರಾಮ ಮಟ್ಟದಲ್ಲಿ ಜನಜಾಗೃತಿ ಮೂಡಿಸಿ ಸಹಕರಿಸಬೇಕು ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಕ್ಷೇತ್ರದ ಶಾಸಕ ಪ್ರಭು ಬಿ. ಚವ್ಹಾಣ ಕರೆ ನೀಡಿದರು.

ಭಾರತೀಯ ಜನತಾ ಪಾರ್ಟಿ ಔರಾದ(ಬಿ) ಮಂಡಲದ ವತಿಯಿಂದ ಪಟ್ಟಣದ ಖಾಸಗಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಅಭಿಯಾನವು ಕೇವಲ ಆಡಳಿತಾತ್ಮಕ ಪ್ರಕ್ರಿಯೆಯಲ್ಲ, ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ಮತದಾರರ ಪಟ್ಟಿಯ ಶುದ್ಧೀಕರಣ, ಅರ್ಹ ಮತದಾರರ ಹೆಸರು ಸೇರ್ಪಡೆ, ನಕಲಿ ಹಾಗೂ ಅನರ್ಹ ಹೆಸರುಗಳ ತೆರವು ಮತ್ತು ಮತದಾರರ ಪಟ್ಟಿಯನ್ನು ಪಾರದರ್ಶಕ ಹಾಗೂ ವಿಶ್ವಾಸಾರ್ಹವಾಗಿಸುವುದು ಅಭಿಯಾನದ ಮುಖ್ಯ ಉದ್ದೇಶವಾಗಿದೆ. ಗ್ರಾಮಗಳಲ್ಲಿ ಮತದಾರರ ಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸಿಕೊಳ್ಳಲು ಸರ್ಕಾರ ಉತ್ತಮ ಅವಕಾಶ ಕಲ್ಪಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.



ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ 12 ವರ್ಷಗಳಲ್ಲಿ ದೇಶದ ಅಭಿವೃದ್ಧಿಗೆ ಹಲವು ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದೆ. ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಜನಧನ್ ಯೋಜನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಮೂಲಕ ದೇಶ ಹೊಸ ದಿಕ್ಕಿನತ್ತ ಸಾಗುತ್ತಿದೆ ಎಂದು ಅವರು ಹೇಳಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಮತದಾರರ ಪಟ್ಟಿಯಲ್ಲಿ ಮೃತಪಟ್ಟವರ ಹೆಸರುಗಳು, ತಪ್ಪು ಮುದ್ರಣಗಳು ಹಾಗೂ ಸ್ಥಳಾಂತರಗೊಂಡವರ ವಿವರಗಳನ್ನು ಸರಿಪಡಿಸುವ ಕೆಲಸದಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದರು. ಪ್ರತಿಯೊಬ್ಬ ಕಾರ್ಯಕರ್ತರೂ ಜವಾಬ್ದಾರಿಯುತವಾಗಿ ಕೆಲಸ ಮಾಡಿದರೆ ಎಸ್‌ಐಆರ್ ಅಭಿಯಾನ ಯಶಸ್ವಿಯಾಗಲಿದೆ ಎಂದು ಹೇಳಿದರು.

ಮುಖಂಡರಾದ ಬಾಬುರಾವ ಕಾರಬಾರಿ, ಸಂಜಯ ನಿಷ್ಕಿನ್ ಹಾಗೂ ಶಿವರಾಜ ಗಂದಗೆ ಮಾತನಾಡಿ, ಪಕ್ಷದ ಸಂಘಟನೆ ಬಲಪಡಿಸುವಲ್ಲಿ ಕಾರ್ಯಕರ್ತರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ ಸೇರಿದಂತೆ ಪಕ್ಷದ ಅನೇಕ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭಾಗವಹಿಸಿದ್ದರು. ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸುಮಾರು ಐದು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಸಮಾವೇಶದಲ್ಲಿ ಉಪಸ್ಥಿತರಿದ್ದು, ಎಸ್‌ಐಆರ್ ಅಭಿಯಾನವನ್ನು ಯಶಸ್ವಿಗೊಳಿಸುವ ಸಂಕಲ್ಪ ಕೈಗೊಂಡರು.

# ಆಲದಹಳ್ಳಿ ಈಚಲಳ್ಳದ ಪರಂಪೋಕ್ ಸರಕಾರಿ ಜಾಗ ಒತ್ತವರಿ ತೆರವು-ಎಡಿಸಿ ಜುಬೇರ್



ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ, ಜೂ.14** ಇಲ್ಲಿಗೆ ಸಮೀಪದ ಆಲದಹಳ್ಳಿ ಗ್ರಾಮದ ಸರ್ವೇ ನಂ 38/ಎ ಗೆ ಸಂಬಂಧಿಸಿದ ಈಚಲಹಳ್ಳದ ಪರಂಪೋಕ್‌ನ 3.28 ಎಕರೆ ಜಮೀನನ್ನು ಜಿಲ್ಲಾಡಳಿತ ವಶಕ್ಕೆ ಪಡೆದುಕೊಂಡಿದೆ.

ಎಡಿಸಿ ಮಹಮ್ಮದ್ ರಘುಬೇರ ಅವರ ನೇತೃತ್ವದಲ್ಲಿ ಡಿಡಿಎಲ್ ಆರ್. ಪ್ರಮೋದ್, ಎಡಿಎಲ್ ಆರ್ ಬಳ್ಳಾರಪ್ಪ ಮೊದಲಾದವರ ತಂಡ ಜೆಸಿಬಿ ಮೂಲಕ ಒತ್ತವರಿ ಮಾಡಿದ್ದನ್ನು ತೆರವು ಮಾಡಿ. ಇದು ಸರ್ಕಾರಿ ಜಮೀನು ಎಂದು ಫಲಕ ಹಾಕಿದರು.

ಈ ಜಮೀನಿಗೆ ಸಂಬಂಧ ಪಟ್ಟಂತೆ ನಗರದ ಕಾಂಗ್ರೆಸ್ ಮುಖಂಡ ತಮ್ಮ ಪಟ್ಟಾ ಜಮೀನಿನಲ್ಲಿ ಫಾರಂ ಹೌಸ್ ಕಟ್ಟಿ ಅದರೊಂದಿಗೆ 22 ಸೇಂಟ್ಸ್ ಈಚಲಳ್ಳದ ಜಮೀನನ್ನು ಒತ್ತುವರಿ ಮಾಡಿ ಕಾಂಪೌಂಡ್ ಕಟ್ಟಿದ್ದರು. ಅದನ್ನು ತೆರವು ಗೊಳಿಸಲಾಗಿದೆ. ಒಂದಿಷ್ಟು ಕಟ್ಟಡದ ಭಾಗವನ್ನು ತಾವೇ ತೆರವುಗೊಳಿಸುವುದಾಗಿ ಜಿಲ್ಲಾಡಳಿತಕ್ಕೆ ತಿಳಿಸಿದರಂತೆ.

ಇದೇ ರೀತಿ ಅನೇಕ ರಾಜಕೀಯ ಮುಖಂಡರು ಉದ್ಯಾನವನಗಳನ್ನು ಸಹ ಅತಿಕ್ರಮಿಸಿ ನಿವೇಶನ ಮಾಡಿಕೊಂಡಿದ್ದಾರಂತೆ. ಅದರ ಬಗ್ಗೆ ದೂರುಗಳು ಬಂದಿದ್ದು ಜಿಲ್ಲಾಡಳಿತ ಅವುಗಳ ಪರಿಶೀಲನೆ ನಡೆಸಿದೆಯಂತೆ.

ಅತಿಕ್ರಮಣವೆಲ್ಲ ಬೇನಾಮಿ ಹೆಸರಲ್ಲಿ ಬಹುತೇಕವಾಗಿ ಪಾಲಿಕೆಯಲ್ಲಿ ಅಧಿಕಾರ ನಡೆಸಿದವರಿಂದ ಆಗಿದೆ ಎನ್ನಲಾಗುತ್ತಿದೆ. ಬರುವ ದಿನಗಳಲ್ಲಿ ಅವುಗಳು ಸಹ ಹೊರಬರಲಿವೆ ಎಂಬ ಮಾಹಿತಿ ಇದೆ.

# ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಯುವಜನತೆ ಸಂಕಲ್ಪ ಮಾಡಲಿ: ಡಾ. ಧ್ಯಾನೇಶ್ವರ ನಿರಗುಡೆ

ಕನ್ನಡ ಮಾತೃ ಭೂಮಿ ವಾರ್ತೆ

**ಬೀದರ, ಜೂ.14–** ಯುವಜನತೆ ಹಾಗೂ ವಿದ್ಯಾರ್ಥಿಗಳು ತಂಬಾಕು ವ್ಯಸನದಿಂದ ದೂರವಿದ್ದು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವ ಮೂಲಕ ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಧ್ಯಾನೇಶ್ವರ ನಿರಗುಡೆ ಕರೆ ನೀಡಿದರು.

ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬ್ರಿಮ್ಸ್), ಬೋದಕ ಆಸ್ಪತ್ರೆ, ಮತ್ತು ದಂತ ಮಹಾವಿದ್ಯಾಲಯ ಎಸ್.ಬಿ. ಪಾಟೀಲ್, ನೌಬಾದ್ ಆಸ್ಪತ್ರೆ, ಹಾಗೂ ಸಂಶೋಧನಾ ಕೇಂದ್ರ, ಶ್ರೀ ಸಿದ್ದರಾಮೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ವಸಂತ ನರ್ಸಿಂಗ್ ಕಾಲೇಜು ಮತ್ತು ಸರ್ಕಾರಿ ಬ್ರಿಮ್ಸ್ ನರ್ಸಿಂಗ್ ಕಾಲೇಜುಗಳ ಸಹಯೋಗದಲ್ಲಿ ಆಯೋಜಿಸಿದ್ದ ಭವ್ಯ ತಂಬಾಕು ವಿರೋಧಿ ಜಾಗೃತಿ ಜಾಥಾಕ್ಕೆ ಅವರು ಹಸಿರು ನಿಶಾನೆ ತೋರಿಸಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ತಂಬಾಕು ಸೇವನೆಯು ಮಾನವನ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮಗಳನ್ನು ಉಂಟುಮಾಡುತ್ತದೆ. ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪಾರ್ಶ್ವವಾಯು, ಉಸಿರಾಟದ ಸಮಸ್ಯೆಗಳು ಸೇರಿದಂತೆ ಅನೇಕ ಸಾಂಕ್ರಾಮಿಕವಲ್ಲದ ಕಾಯಿಲೆಗಳಿಗೆ ತಂಬಾಕು ಪ್ರಮುಖ ಕಾರಣವಾಗಿದೆ ಎಂದು ಎಚ್ಚರಿಸಿದರು.




ಜಾಥಾದ ವೇಳೆ ವಿದ್ಯಾರ್ಥಿಗಳು ತಂಬಾಕು ಸೇವನೆಯ ದುಷ್ಪರಿಣಾಮಗಳನ್ನು ಬಿಂಬಿಸುವ ಫಲಕಗಳನ್ನು ಪ್ರದರ್ಶಿಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ವಿವಿಧ ಘೋಷಣೆಗಳು, ಜಿಂಗಲ್ಸ್ ಹಾಗೂ ಸಂದೇಶಗಳ ಮೂಲಕ ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯ ಮತ್ತು ಸಾಮಾಜಿಕ ಸಮಸ್ಯೆಗಳ ಕುರಿತು ಅರಿವು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯ ಹಾನಿಗಳ ಕುರಿತು ಮಾಹಿತಿ ನೀಡಿ, ತಂಬಾಕು ನಿಯಂತ್ರಣ ಕಾರ್ಯಕ್ರಮ ಗಳ ಯಶಸ್ಸಿಗೆ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ. ಪ್ರತಿಯೊಬ್ಬರೂ ತಂ ಬಾಕು ಮುಕ್ತ ಸಮಾಜ ನಿರ್ಮಾಣದ ಸಂಕಲ್ಪ ಕೈಗೊಳ್ಳಬೇಕು ಎಂದು ಹೇಳಿದರು. ವಿಶ್ವ ಆರೋಗ್ಯ ಸಂಸ್ಥೆಯ ಅಂದಾಜಿನ ಪ್ರಕಾರ, ತಂಬಾಕು ಸೇವನೆಯು ವಿಶ್ವದಾದ್ಯಂತ ಲಕ್ಷಾಂತರ ಜನರ ಸಾವಿಗೆ ಕಾರಣವಾಗುತ್ತಿದೆ. ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಹೃದಯಾಘಾತ ಸೇರಿದಂತೆ ಅನೇಕ ಗಂಭೀರ ಕಾಯಿಲೆಗಳ ಅಪಾಯವನ್ನು ತಂಬಾಕು ಹೆಚ್ಚಿಸುತ್ತದೆ ಎಂದು ಅವರು ತಿಳಿಸಿದರು.

ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾದ ಜಾಥಾವು ಜನವಾಡ ರಸ್ತೆಯ ಮೂಲಕ ಅಂಬೇಡ್ಕರ್ ವೃತ್ತದವರೆಗೆ ಸಂಚರಿಸಿ ಪುನಃ ಕಚೇರಿಗೆ ಮರಳಿತು. ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು, ಅಧ್ಯಾಪಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉತ್ಸಾಹದಿಂದ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ. ಶಂಕರೆಪ್ಪ ಬೋಮ್ಮಾ ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಉಪನ್ಯಾಸಕರು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಸರ್ಕಾರದ ಯೋಜನೆಗಳ ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿರಲಿ -ಕವಿತಾ ಮನ್ನಿಕೇರಿ

ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯನಗರ, ಜೂ.14–** ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ದೊರೆಯುವುದರ ಜತೆಗೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಎಂದು ಜಿಲ್ಲಾಧಿಕಾರಿ ಕವಿತಾ.ಎಸ್ ಮನ್ನಿಕೇರಿ ಅವರು ಅಧಿಕಾರಿಗಳಿಗೆ ನಿರ್ದೇಶಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಯೋಜನೆಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯೋಜನೆಯ ಅನುಷ್ಠಾನ ಹಾಗೂ ಫಲಾನುಭವಿಗಳ ಆಯ್ಕೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಯುವಕರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರವಾಸೋದ್ಯಮ ಇಲಾಖೆಯ ಈ ಯೋಜನೆ ಅತ್ಯಂತ ಸಹಕಾರಿಯಾಗಿದೆ. ಅಧಿಕಾರಿಗಳು ಯಾವುದೇ ವಿಳಂಬ ಮಾಡದೇ ಅರ್ಹ ಫಲಾನುಭವಿಗಳಿಗೆ ಮೊಬೈಲ್ ಕ್ಯಾಂಟಿನ್ ವಾಹನಗಳ ಸೌಲಭ್ಯ ನೀಡಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಹೇಳಿದರು.



ವಿಶ್ವವಿಖ್ಯಾತ ಹಂಪಿ ಸೇರಿದಂತೆ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಪೂರಕವಾಗಿ ಯೋಜನೆ ಅನುಷ್ಠಾನವಾಗಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಆರ್ಥಿಕ ಸಬಲೀಕರಣಕ್ಕಾಗಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಹಮ್ಮಿಕೊಂಡಿರುವ ಮೊಬೈಲ್ ಕ್ಯಾಂಟೀನ್' ಯಾವುದೇ ಲೋಪದೋಷಗಳಿಲ್ಲದೆ ಪಾರದರ್ಶಕವಾಗಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಬೇಕು ಎಂದು ಹೇಳಿದರು.

ಹಂಪಿ ಸೇರಿದಂತೆ ಆಯಕಟ್ಟಿನ ಪ್ರದೇಶಗಳಲ್ಲಿ ಅಥವಾ ಜಿಲ್ಲೆಗೆ ಬರುವ ದೇಶ-ವಿದೇಶಿ ಪ್ರವಾಸಿಗರ ಗಮನದಲ್ಲಿಟ್ಟುಕೊಂಡು, ವಿಶ್ವ ಪಾರಂಪರಿಕ ತಾಣ ಹಂಪಿ, ಕಮಲಾಪುರ, ಹೊಸಪೇಟೆ ನಗರದ ಪ್ರಮುಖ ವೃತ್ತಗಳು ಹಾಗೂ ಪ್ರವಾಸಿಗರು ಹೆಚ್ಚಾಗಿ ಸಂಚರಿಸುವ ಹೆದ್ದಾರಿಯ ಆಯಕಟ್ಟಿನ ಜಾಗಗಳಲ್ಲಿ ಈ ಸಂಚಾರಿ ಕ್ಯಾಂಟೀನ್ ನಡೆಸಲು ಅವಕಾಶ ಕಲ್ಪಿಸಿ ಕೊಡಬೇಕು.

ಇಲಾಖೆ ಯಿಂದ ಸಿಗುವ ಗರಿಷ್ಠ ಸಹಾಯಧನ ಮೊತ್ತ ಹಾಗೂ ಬ್ಯಾಂಕ್‌ಗಳ ಮೂಲಕ ಒದಗಿಸಲಾಗುವ ಸಾಲ ಸೌಲಭ್ಯ ಸಕಾಲಕ್ಕೆ ಸಿಗುವಂತೆ ಲೀಡ್ ಬ್ಯಾಂಕ್ ಅಧಿಕಾರಿ ಗಳೊಂದಿಗೆ ಸಮನ್ವಯತೆ ಸಾಧಿಸುವ ಮೂಲಕ ಕಾರ್ಯನಿರ್ವಹಿಸಬೇಕು ಎಂದರು.

ಪ್ರವಾಸಿ ತಾಣ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಮೊಬೈಲ್ ಕ್ಯಾಂಟೀನ್ ವಿತರಿಸುವುದಷ್ಟೇ ಮುಖ್ಯವಲ್ಲ, ಪ್ರವಾಸಿ ತಾಣಗಳ ಸ್ವಚ್ಛತೆ ಕಾಪಾಡುವುದು ಅಷ್ಟೇ ಮುಖ್ಯ ಎಂದು ಹೇಳಿದರು.

ಕ್ಯಾಂಟೀನ್‌ಗಳಲ್ಲಿ ಸಂಪೂರ್ಣ ಪ್ಲಾಸ್ಟಿಕ್ ನಿಷೇಧ: ಕಸ ವಿಲೇವಾರಿಗೆ ಜೈವಿಕವಾಗಿ ಕೊಳೆಯುವ ವಸ್ತುಗಳ ಬಳಸಬೇಕು ಮತ್ತು ತ್ಯಾಜ್ಯ ವಿಲೇವಾರಿಗೆ ಕಸದ ಡಬ್ಬಿ ಬಳಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕು.

ಹಂಪಿಯ ರಕ್ಷಿತ ಮತ್ತು ಬಫರ್ ವಲಯದ ಐತಿಹಾಸಿಕ ಸ್ಮಾರಕಗಳ ಸೌಂದರ್ಯಕ್ಕೆ ಧಕ್ಕೆ ಬಾರದಂತೆ ನಿಯಮ ಪಾಲಿನೆ ಮಾಡಬೇಕು ಎಂದು ಅವರು ಎಚ್ಚರಿಸಿದರು.

ಈ ಯೋಜನೆಯ ಮೂಲಕ ಪ್ರವಾಸಿಗರಿಗೆ ಶುಚಿ-ರುಚಿಯಾದ ಸ್ಥಳೀಯ ಮತ್ತು ಸಾಂಪ್ರದಾಯಿಕ ಆಹಾರ ಪದಾರ್ಥಗಳು ಕೈಗೆಟುಕುವ ದರದಲ್ಲಿ ಸಿಗುವಂತಾಗಬೇಕು.

ಇದು ಕೇವಲ ಒಂದು ಸಮುದಾಯದ ಆರ್ಥಿಕ ಪ್ರಗತಿಯಷ್ಟೇ ಅಲ್ಲದೆ, ಜಿಲ್ಲೆಯ ಪ್ರವಾಸೋದ್ಯಮ ಮೂಲಸೌಕರ್ಯ ವೃದ್ಧಿಗೂ ಪೂರಕವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಈ ವೇಳೆ ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕ ಪ್ರಭುಲಿಂಗ ತಳಕೇರಿ ಮಾತನಾಡಿ, 2024-25ನೇ ಸಾಲಿಗೆ ಈ ಯೋಜನೆಯಡಿ, ಪರಿಶಿಷ್ಟ ಜಾತಿಗೆ 6 ಮತ್ತು ಪರಿಶಿಷ್ಟ ಪಂಗಡಕ್ಕೆ 4 ಸೇರಿ ಒಟ್ಟು 10 ಜನ ಫಲಾನುಭವಿಗಳಿಗೆ ನೀಡುವ ಗುರಿ ಹೊಂದಲಾಗಿದೆ. ಈ ಪೈಕಿ 4 ಫಲಾನುಭವಿಗಳ ಅರ್ಜಿ ಅನುಮೋದನೆಗೊಂಡು ಸಹಾಯಧನ ಮಂಜೂರು ಮಾಡಲಾಗಿದೆ. ಅರ್ಹ ಫಲಾನುಭವಿಗಳಿಗೆ ಶೀಘ್ರದಲ್ಲೇ ವಾಹನ ವಿತರಣೆ ಮಾಡಲಾಗುವುದು.

ಉಳಿದ 6 ಫಲಾನುಭವಿಗಳ ಆಯ್ಕೆಗಾಗಿ ಮುಂದಿನ ದಿನಗಳಲ್ಲಿ ಅರ್ಜಿ 2025-26ನೇ ಸಾಲಿಗಾಗಿ ಪರಿಶಿಷ್ಟ ಜಾತಿಗೆ 6 ಮತ್ತು ಪರಿಶಿಷ್ಟ ಪಂಗಡಗಕ್ಕೆ 4 ಸೇರಿ ಒಟ್ಟು 10 ಜನ ಫಲಾನುಭವಿಗಳನ್ನು ಆಯ್ಕೆ ಮಾಡಲು ಗುರಿ ನಿಗದಿಪಡಿಸಲಾಗಿದೆ. ಅದಕ್ಕಾಗಿ ಪರಿಶಿಷ್ಟ ಜಾತಿ ಸಮುದಾ ಯದಿಂದ 25 ಹಾಗೂ ಪರಿಶಿಷ್ಟ ಪಂಗಡ ಫಲಾನುಭವಿಗಳಿಂದ 4 ಸೇರಿ ಒಟ್ಟು 29 ಅಭ್ಯರ್ಥಿಗಳಿಂದ ಅರ್ಜಿ ಸ್ವೀಕೃತವಾಗಿದೆ. ಫಲಾನುಭವಿಗಳ ಆಯ್ಕೆಯಲ್ಲಿ ಶೇ.33 ರಷ್ಟು ಮಹಿಳೆಯರಿಗೆ ಮೀಸಲಾತಿ ಹಾಗೂ ಫಲಾನುಭವಿಗಳ ವಯಸ್ಸು ಮತ್ತು ಎಸ್ ಎಸ್ ಎಲ್ ಸಿ ಯಲ್ಲಿ ಪಡೆದ ಅಂಕ ಮತ್ತು ವಯೋಮಿತಿ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರವಿಕುಮಾರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಟಗಿ ನಾಗಚೌಡೇಶ್ವರಿ ಅಮ್ಮನವರ 37ನೇ ವಿಶೇಷ ಪೂಜೆ

ಕನ್ನಡ ಮಾತೃ ಭೂಮಿ ವಾರ್ತೆ



**ಕುಕುನೂರು, ಜೂ.14** ತಾಲೂಕಿನ ಇಟಗಿ ಗ್ರಾಮದ 15ನೇ ಜೂನ್ 2026ರ ಸೋಮವಾರ ಬೆಳಿಗ್ಗೆ 11 ರಿಂದ ಮದ್ಯಾಹ್ನ 4 ರವರೆಗೆ, ಶ್ರೀ ಪರಾಭವ ನಾಮ ಸಂವತ್ಸರ, ಅಧಿಕ ಜ್ಯೇಷ್ಠ ಮಾಸೆ ಗ್ರೀಷ್ಮ ಋತು, ಉತ್ತರಾಯಣ ಕೃಷ್ಣ ಪಕ್ಷದ 37ನೇ ಅಮಾವಾಸ್ಯೆ ವಿಶೇಷ ಪೂಜಾ ಕಾರ್ಯಕ್ರಮ ಜರಗುತ್ತದೆ.

ಈ ಪೂಜಾ ಕಾರ್ಯಕ್ರಮಕ್ಕೆ ಸಹ-ಕುಟುಂಬ ಸಮೇತ ಆಗಮಿಸಿ, ಶ್ರೀ ನಾಗಚೌಡೇಶ್ವರಿ ಅಮ್ಮನವರ ಮತ್ತು ಶ್ರೀ ಪಂಚನಾಗದೇವರ ಅನುಗ್ರಹಕ್ಕೆ ಪಾತ್ರರಾಗಬೇಕೆಂದು ರಮೇಶ್ ಸುರ್ವೆ ಅವರು ಪತ್ರಿಕೆಗೆ ತಿಳಿಸಿದರು.

ಸೇವಾಕರ್ತರಿಗೆ : ಶ್ರೀ ನಾಗಚೌಡೇಶ್ವರಿ ಅಮ್ಮನವರು ಮತ್ತು ಶ್ರೀ ಪಂಚನಾಗದೇವರ ಪ್ರತಿ ಅಮಾವಾಸ್ಯೆ ಕುಟುಂಬ ಪೂಜಾ ಸೇವೆಗೆ : 3001/- (6 ಹಾರಗಳು, ಅಮ್ಮನವರಿಗೆ ಸೀರೆ, ಹೂ-ಹಣ್ಣು-ಕಾಯಿ, ಪೂಜಾ ಸಾಮಗ್ರಿಗಳು ಮತ್ತು ಅಭಿಷೇಕ, ಪ್ರಸಾದ ಸೇವೆ ಒಳಗೊಂಡಿರುತ್ತದೆ.

ಪ್ರತಿ ತಿಂಗಳ ಅಮಾವಾಸ್ಯೆಯ ದಿನ ಮಾತ್ರ, ದೇವರ ದರ್ಶನ ಮತ್ತು ಪೂಜಾ ಕಾರ್ಯಕ್ರಮಗಳು ನಡೆಯುತ್ತದೆ. ಉಳಿದ ದಿನಗಳಲ್ಲಿ ಹೊರಗಿನಿಂದಲೇ ದರ್ಶನ ಮತ್ತು ಪೂಜೆ ಮಾಡಿಕೊಳ್ಳಬೇಕೆಂದು, ಅಮಾವಾಸ್ಯೆ ದಿನ ಮಾತ್ರ ವಿಶೇಷ ದರ್ಶನ ನೀಡುವ ಕ್ಷೇತ್ರವಾಗಿದೆ. ದೇವಿಗೆ ಸಂಕಲ್ಪ ಮಾಡಿಕೊಳ್ಳುವರು 5 ಅಮಾವಾಸ್ಯೆ ಪೂಜೆ ಪೂರೈಸಬೇಕು.

ಪೂಜೆ, ಸೇವೆ ಮತ್ತು ಅಭಿವೃದ್ಧಿಗಾಗಿ ದಾನಿಗಳು ಹೆಸರು ನೋಂದಾಯಿಸಿಕೊಳ್ಳುವವರು ರಮೇಶ ಸುರ್ವೆ ಸಂಚಾಲಕರು. ಮೊಬೈಲ್ : 9845307327. ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ಜುಲೈ 12ರಂದು ವಿಶ್ವಕರ್ಮರ ಜನ ಜಾಗೃತಿ ಜಿಲ್ಲಾ ಸಮಾವೇಶ, ಪ್ರತಿಭಾ ಪುರಸ್ಕಾರ

ಕನ್ನಡ ಮಾತೃ ಭೂಮಿ ವಾರ್ತೆ

**ಕೊಪ್ಪಳ, ಜೂ.14–** ಅಖಿಲ ಕರ್ನಾಟಕ ವಿಶ್ವ ಕರ್ಮ ಮಹಾಸಭಾ ಜಿಲ್ಲಾ ವಿಶ್ವ ಕರ್ಮರ ಜನ ಜಾಗೃತಿ ಬೃಹತ್ ಸಮಾವೇಶ ಹಾಗೂ ಸಮಾಜದ ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರ ಪ್ರತಿಭಾ ಪುರಸ್ಕಾರ ಸಮಾರಂಭ ಬರುವ ತಿಂಗಳ ಜುಲೈ 12ರ ರವಿವಾರ ಬೆಳಿಗ್ಗೆ 9.30 ಗಂಟೆಗೆ ನಗರದ ಶ್ರೀ ಶಿವಶಾಂತ ವೀರ ಮಂಗಲ ಭವನ ದಲ್ಲಿ ಜರುಗಲಿದೆ ಎಂದು ಮಹಾಸಭಾ ರಾಜ್ಯ ಉಪಾಧ್ಯಕ್ಷ ನಾಗಲಿಂಗಪ್ಪ ಪತ್ತಾರ್ ತಿಳಿಸಿದರು,

ಅವರು ಶುಕ್ರವಾರ ಇಲ್ಲಿನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಪತ್ರಿಕಾ ಭವನದಲ್ಲಿ ಏರ್ಪಡಿಸಿದ ಪತ್ರಿಕಾಗೋಷ್ಠಿಯಲ್ಲಿ ಮಾಧ್ಯಮದೊಂದಿಗೆ ಮಾತನಾಡಿ ಕಾರ್ಯಕರ್ಮದ ಸಂಪೂರ್ಣ ವಿವರಣೆ ನೀಡಿದ ಅವರು ಕಾರ್ಯಕ್ರಮ ದಲ್ಲಿ ನಮ್ಮ ಸಮಾಜದ ಹಿರಿಯ ಮುಖಂಡ ಮಹಾಸಭಾ ರಾಜ್ಯ ಅಧ್ಯಕ್ಷ ಮಾಜಿ ಶಾಸಕ ಕೆಪಿ ನಂಜುಂಡಿ ವಿಶ್ವಕರ್ಮ ಇವರು ಆಗಮಿಸಲಿದ್ದು ಅವರ ಸಾರಥ್ಯದಲ್ಲಿ ಕೊಪ್ಪಳದಲ್ಲಿ ಜಿಲ್ಲಾ ಮಟ್ಟದ ನಮ್ಮ ಸಮಾಜದ ಬೃಹತ್ ಸಮಾವೇಶ ಆ ಯೋಜನೆಗೊಂಡಿದೆ ಎಂದು ತಿಳಿಸಿದರು, ಮುಂದುವರೆದು ಮಾತನಾಡಿ ಇದೇ ವೇಳೆ ಪ್ರಸಕ್ತ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಗಣನೀಯ ಸಾಧನೆ ಮಾಡಿದ ನಮ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಸಮಾರಂಭ ಕೂಡ ನಡೆಯಲಿದೆ, ಪ್ರಸಕ್ತ ಸಾಲಿನಲ್ಲಿ ಶೇಕಡ 75ರಷ್ಟು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳು ಇದೇ ತಿಂಗಳ 30ನೇ ತಾರೀಕಿನ ಒಳಗಾಗಿ ತಮ್ಮ ಸಂಪೂರ್ಣ ಮಾಹಿತಿಯೊಂದಿಗೆ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿ ದರು, ಕಾರ್ಯಕ್ರಮದಲ್ಲಿ ಸಮಾಜದ ಶ್ರೀಗಳು ,ಜನಪ್ರತಿನಿಧಿಗಳು ಸಮಾಜ ಸಂಘಟನೆಯ ಪದಾಧಿಕಾರಿಗಳು ಪಾಲ್ಗೊಳ್ಳುವವರು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯ ಘಟಕದ ಉಪಾಧ್ಯಕ್ಷರಾದ ನಾಗಲಿಂಗಪ್ಪ ಪತ್ತಾರ್ ಅವರು ಮಾಹಿತಿ ನೀಡಿದರು ಹಾಗೂ ಸಮಾಜ ಬಾಂಧವರು ತಮ್ಮ ತಮ್ಮ ಮಕ್ಕಳ ಮತ್ತು ಕುಟುಂಬದೊಂದಿಗೆ ಬೃಹತ್ ಸಮಾವೇಶದಲ್ಲಿ ಪಾಲ್ಗೊಂ ಡು ಕಾರ್ಯಕ್ರಮ ಯಶಸ್ವಿಗೊಳಿ ಸಬೇಕೆಂದು ಪ್ರಕಟಣೆ ಮೂಲಕ ತಿಳಿಸಿ ಸರ್ವರನ್ನು ಸ್ವಾಗತಿಸಿದ್ದಾರೆ,




ಪತ್ರಿಕಾಗೋಷ್ಠಿಯಲ್ಲಿ ಸಂಘದ ಜಿಲ್ಲಾಧ್ಯಕ್ಷ ವೀರೇಶ್ ಶರಣಪ್ಪ ಪತ್ತಾರ್, ಕೊಪ್ಪಳ ತಾಲೂಕ ಅಧ್ಯಕ್ಷ ಶ್ರೀನಿವಾಸ್ ಪಂಡಿತ್, ವೀರೇಶ್ ಕಮ್ಮಾರ್ ,ಹನುಮೇಶ್, ಹಾಗೂ ಮುಖಂಡರಾದ ಪ್ರಭಾಕರ್ ಬಡಿಗೇರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಚ್ಚುಕಟ್ಟಾಗಿ ಆಯೋಜಿಸಿ

ಕನ್ನಡ ಮಾತೃ ಭೂಮಿ ವಾರ್ತೆ

**ವಿಜಯಪುರ, ಜೂ.14–** 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21ರಂದು ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಬೆಳಿಗ್ಗೆ 6 ಗಂಟೆಯಿಂದ 7.45 ರವರೆಗೆ ಆಯೋಜಿಸಲಾಗುತ್ತಿದ್ದು, ಈ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಹಾಗೂ ಶಿಷ್ಟಾಚಾರದಂತೆ ಆಯೋಜಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಆಯುಷ್ ಇಲಾಖೆಯ ಸಹಯೋಗದಲ್ಲಿ ನಡೆಯಲಿರುವ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದ ಅಪರ ಜಿಲ್ಲಾಧಿಕಾರಿ ಅವರು ಯೋಗ ದಿನಾಚರಣೆಯ ಕಾರ್ಯಕ್ರಮವನ್ನು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಂಡು ಸುಸೂತ್ರವಾಗಿ ನಡೆಸಲು ಸಂಬಂಧಿಸಿದ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು.



ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿ, ಯೋಗ ದಿನಾಚರಣೆಯನ್ನು ಯಶಸ್ವಿಗೊಳಿಸಬೇಕು ಎಂದು ಅವರು ಸೂಚಿಸಿದರು. ಅಂತರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಲು ಸಾರ್ವಜನಿಕರು k||t://psb.kbd|.¦sÃb?whi=Hbwqb|bmb ವೆಬ್‌ಸೈಟ್ ಮೂಲಕ ಜೂನ್ 14ರಿಂದ ಜೂನ್ 21ರವರೆಗೆ ನೋಂದಣಿ ಮಾಡಿಕೊಳ್ಳಬಹುದು ಎಂದು ಈ ಸಂದರ್ಭದಲ್ಲಿ ಹೇಳಿದರು.

ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಕ್ರೀಡಾಂಗಣದಲ್ಲಿ ಆಚರಿಸುವ ಹಿನ್ನೆಲೆಯಲ್ಲಿ ಕ್ರೀಡಾಂಗಣವನ್ನು ಕಾಯ್ದಿರಿಸಲು ಮತ್ತು ಹವಾಮಾನದಲ್ಲಿ ಬದಲಾವಣೆ ಕಂಡುಬಂದಲ್ಲಿ ಒಳಾಂಗಣ ಕ್ರೀಡಾಂಗಣವನ್ನು ಮುಂಜಾಗ್ರತೆಯಾಗಿ ಕಾಯ್ದಿರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರಲ್ಲಿ ಯೋಗದ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಜೂ.20ರಂದು ಬೆಳಿಗ್ಗೆ 8 ಗಂಟೆಗೆ ನಗರದ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಯೋಗ ಜಾಥಾವನ್ನು ಹಮ್ಮಿಕೊಳ್ಳಲಾಗುವುದು.

ಈ ಜಾಥಾದಲ್ಲಿ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿ ಅವರು ಮನವಿ ಮಾಡಿದರು.

ಈ ಸಭೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ವಿದ್ಯಾವತಿ ಅಥಣಿ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಾದ ಆರ್.ಎಸ್.ಅಥಣಿ, ಆಯುಷ್ ಇಲಾಖೆಯ ಸಹಾಯಕ ಆಡಳಿತಾಧಿಕಾರಿಗಳಾದ ಸಂಜು ಕುಲಕರ್ಣಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಎನ್‌ಸಿಸಿಯ ಸಂತೋಷ್ ಪಾಟೀಲ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಆಯುರ್ವೇದ ಮಹಾವಿದ್ಯಾಲಯದ ಪ್ರಾಂಶುಪಾಲರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ...ಮೊದಲನೇ ಪುಟದಿಂದ

# ರಾತ್ರಿಯಿಡಿ ಸುರಿದ ಮಳೆಗೆ ಜನಜೀವನ ಅಸ್ತವ್ಯಸ್ಥ ಹಲವಡೆ ಸಂಚಾರ ಸ್ಥಗಿತ-ಮನೆಗಳಿಗೆ ನುಗ್ಗಿದ ನೀರು

ಹಲವು ಮನೆಗಳಿಗೆ ನುಗ್ಗಿದೆ. ನಗರದ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದರಿಂದ ಅನೇಕ ನಿವಾಸಗಳಲ್ಲಿ ನೀರು ನುಗ್ಗಿ ಮನೆ ಬಳಕೆಯ ವಸ್ತುಗಳು ಹಾನಿಗೊಳಗಾಗಿವೆ. ಮನೆಯೊಳಗೆ ನಿಂತ ನೀರನ್ನು ನಿವಾಸಿಗಳು ಬಕೆಟ್ ಹಾಗೂ ಮೋಟಾರ್‌ಗಳ ಸಹಾಯದಿಂದ ಹೊರಹಾಕಲು ಹರಸಾಹಸ ಪಟ್ಟರು.

ಚರಂಡಿ ನೀರು ಮನೆಗಳಿಗೆ ನುಗ್ಗಿದ್ದರಿಂದ ದುರ್ವಾಸನೆ ಆವರಿಸಿ, ಆರೋಗ್ಯದ ಸಮಸ್ಯೆ ಉಂಟಾಗುವ ಆತಂಕವೂ ಎದುರಾಗಿದೆ. ಮಳೆ ಆರಂಭವಾಗುತ್ತಿದ್ದಂತೆಯೇ ನಗರದಲ್ಲಿನ ಹಲವು ಬಡಾವಣೆಗಳಲ್ಲಿ ನೀರು ನಿಲ್ಲುವ ಸಮಸ್ಯೆ ಮರುಕಳಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.ಚರಂಡಿಗಳ ಸಮರ್ಪಕ ನಿರ್ವಹಣೆ ಹಾಗೂ ಮಳೆನೀರು ಹರಿದು ಹೋಗುವ ವ್ಯವಸ್ಥೆ ಮಾಡದಿರುವುದೇ ಈ ಸಮಸ್ಯೆಗೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಪಾಲಿಕೆ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ಅವೈಜ್ಞಾನಿಕ ಕಾಮಗಾರಿಗಳಿಂದ ಪ್ರತೀ ಮಳೆಗಾಲದಲ್ಲೂ ಇದೇ ಸಮಸ್ಯೆ ಎದುರಾಗುತ್ತಿದೆ ಎಂದು ನಿವಾಸಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಮಳೆ ಮುಂದುವರಿದರೆ ತಗ್ಗು ಪ್ರದೇಶಗಳಲ್ಲಿ ಇನ್ನಷ್ಟು ನೀರು ನಿಲ್ಲುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು, ಜಲಾವೃತ ಪ್ರದೇಶಗಳಿಂದ ನೀರು ತೆರವುಗೊಳಿಸಲು ತಕ್ಷಣ ಕ್ರಮವಹಿಸಬೇಕು ಹಾಗೂ ಅಪಾಯದ ಸ್ಥಳಗಳಲ್ಲಿ ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸ್ಥಳೀಯರು ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆಗೆ ಆಗ್ರಹಿಸಿದ್ದಾರೆ.

# ಸಮಾಜದ ಬದಲಾಣೆಗೆ ಶ್ರಮಿಸಿದವರನ್ನು ಸ್ಮರಿಸಬೇಕು-ಅಲ್ಲಂಪ್ರಭು ಬೆಟ್ಟದೂರು

ಬೋಳಬಂಡೆಪ್ಪ ಅವರಂತಹ ಹೋರಾಟಗಾರರು ಸಮಾಜದಲ್ಲಿ ಅಪರೂಪದ ವ್ಯಕ್ತಿತ್ವಗಳು. ಅವರು ಯಾವುದೇ ಸಂದರ್ಭದಲ್ಲೂ ತಮ್ಮ ಸೈದ್ಧಾಂತಿಕ ನಿಲುವುಗಳನ್ನು ಬಿಟ್ಟುಕೊಡಲಿಲ್ಲ. ಅವರೊಂದಿಗೆ ನಡೆದ ಒಂದು ಘಟನೆ ಇಂದಿಗೂ ಸ್ಪಷ್ಟವಾಗಿ ನೆನಪಿದೆ, ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ ಲೇಖಕಿ ಪಿ.ಟಿ. ಲಲಿತಾ ನಾಯಕ್ ಅವರು ರಾಯಚೂರಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ತಾವು ಹಾಗೂ ಡಾ. ಬಸವರಾಜ ಸಬರದ ಅವರನ್ನು ಅತಿಥಿಗಳಾಗಿ ಆಹ್ವಾನಿಸಲಾಗಿತ್ತು. ಆ ಸಂದರ್ಭದಲ್ಲಿ ವಿಶ್ವ ಕನ್ನಡ ಸಾಹಿತ್ಯ ಸಮ್ಮೇಳನದ ಕುರಿತು ಭಿನ್ನಾಭಿಪ್ರಾಯಗಳು ವ್ಯಕ್ತವಾಗಿದ್ದವು. ಆಗ ಬೋಳಬಂಡೆಪ್ಪ ಅವರು ಕಾರ್ಯಕ್ರಮ ಸ್ಥಳಕ್ಕೆ ಬಂದು ಪ್ರತಿಭಟನೆ ನಡೆಸಿ, ಕಾರ್ಯಕ್ರಮವನ್ನು ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿದ್ದರು. ಬಳಿಕ ತಮ್ಮ ಒತ್ತಾಯಕ್ಕೆ ಮಣಿದು ಕಾರ್ಯಕ್ರಮವನ್ನು ನಿಲ್ಲಿಸಲಾಗಿತ್ತು. ಬೋಳಬಂಡೆಪ್ಪ ಅವರ ಹೋರಾಟದ ಮನೋಭಾವಕ್ಕೆ ಇದು ಸಾಕ್ಷಿಯಾಗಿದೆ ಎಂದು ಸ್ಮರಿಸಿದರು.

ಕ್ರಾಂತಿ ನಿನಾದಿಸಲಿ ಕವನ ಸಂಕಲನವು ಕೇವಲ ಕವನಗಳ ಸಂಗ್ರಹವಲ್ಲ, ಅದು ಬೋಳಬಂಡೆಪ್ಪ ಅವರ ವಿಚಾರಧಾರೆ ಮತ್ತು ಹೋರಾಟದ ಬದುಕಿನ ದಾಖಲೆಯಾಗಿದೆ. ಈ ಸಂಕಲನದಲ್ಲಿ ಅವರ 15 ಅಪ್ರಕಟಿತ ಕವಿತೆಗಳು ಪ್ರಕಟವಾಗಿದ್ದು, ಅವುಗಳಲ್ಲಿ ಐದು ಕವಿತೆಗಳು ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರಗಳನ್ನು ಆಧರಿಸಿವೆ. ಅಲ್ಲದೆ ಅವರು ತೆಲುಗಿನಿಂದ ಅನುವಾದಿಸಿದ 7 ಕವಿತೆಗಳು ಹಾಗೂ ಬೋಳಬಂಡೆಪ್ಪ ಅವರ ವ್ಯಕ್ತಿತ್ವ ಮತ್ತು ಹೋರಾಟದ ಕುರಿತು ವಿವಿಧ ಕವಿಗಳು ರಚಿಸಿರುವ ಏಳು ಕವಿತೆಗಳೂ ಈ ಸಂಕಲನದಲ್ಲಿ ಸ್ಥಾನ ಪಡೆದಿವೆ ಎಂದು ತಿಳಿಸಿದರು.

ಸಮಾಜದ ಒಳಿತಿಗಾಗಿ ದುಡಿಯುವ ವ್ಯಕ್ತಿಗಳನ್ನು ನೆನೆಯುವುದು ಕೇವಲ ಗೌರವ ಸಲ್ಲಿಸುವುದಲ್ಲ ಅದು ಸಮಾಜದ ಕೃತಜ್ಞತೆಯ ಅಭಿವ್ಯಕ್ತಿಯಾಗಿದೆ. ಇಂತಹ ಕಾರ್ಯಕ್ರಮಗಳು ಸಮಾಜದ ಜಾಗೃತಿಯನ್ನು ಹೆಚ್ಚಿಸುವ ವೇದಿಕೆಗಳಾಗಬೇಕು ಎಂದರು.

ಇದೇ ವೇಳೆ, ಸಾರ್ವಜನಿಕ ಜೀವನದಲ್ಲಿ ಸಮಯಪ್ರಜ್ಞೆಯ ಕೊರತೆ ಬಗ್ಗೆ ಬೇಸರ ವ್ಯಕ್ತಪಡಿಸಿದ ಅವರು, ಇಂತಹ ಗಂಭೀರ ಕಾರ್ಯಕ್ರಮಗಳಿಗೆ ಜನರು ಸಮಯಕ್ಕೆ ಬಾರದೆ ಎರಡು ಗಂಟೆಗಳ ತಡವಾಗಿ ಆಗಮಿಸುವುದು ಆತಂಕಕಾರಿ ಬೆಳವಣಿಗೆ. ತಾವು ಕಾರ್ಯಕ್ರಮಕ್ಕೆ ಬಂದಾಗ ಸ್ವಾಗತಕಾರರನ್ನು ಹೊರತುಪಡಿಸಿ ಯಾರೂ ಇರಲಿಲ್ಲ. ಸಮಯಪ್ರಜ್ಞೆ ಎನ್ನುವುದು ಸಮಾಜದ ಪ್ರಗತಿಗೆ ಅಗತ್ಯವಾದ ಮೌಲ್ಯವಾಗಿದೆ. ಇಂದು ಮಾಡಬೇಕಾದ ಕೆಲಸವನ್ನು ನಾಳೆಗೆ, ನಾಳೆಯ ಕೆಲಸವನ್ನು ನಾಡಿದ್ದಿಗೆ ಮುಂದೂಡುವ ಮನೋಭಾವವೇ ದೇಶದಲ್ಲಿ ತ್ವರಿತ ನಿರ್ಧಾರಗಳು ಕೈಗೊಳ್ಳದ ಪರಿಸ್ಥಿತಿಗೆ ಕಾರಣವಾಗಿದೆ ಎಂದು ಹೇಳಿದರು.

ಸಮಾಜದಲ್ಲಿ ಜಾಗೃತಿ ಮೂಡಿಸುವ ಕಾರ್ಯ ಅತ್ಯಂತ ಮುಖ್ಯವಾಗಿದೆ. ಜನರು ಎಚ್ಚೆತ್ತುಕೊಳ್ಳದಿದ್ದರೆ ಸುಳ್ಳುಗಳೇ ಸತ್ಯಗಳಾಗಿ ಬಿಂಬಿಸಲ್ಪಡುತ್ತವೆ. ಇಂದು ಮೊಬೈಲ್‌ಗಳ ಮೂಲಕ ಇತಿಹಾಸವನ್ನು ತಿರುಚಿ ಜನರಿಗೆ ತಪ್ಪು ಮಾಹಿತಿಯನ್ನು ನೀಡುವ ಪ್ರಯತ್ನಗಳು ನಡೆಯುತ್ತಿವೆ. ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಹಾಗೂ ಹಾಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಧಿಕಾರಾವಧಿಯನ್ನು ಹೋಲಿಕೆ ಮಾಡುವಾಗಲೂ ವಾಸ್ತವಾಂಶಗಳನ್ನು ಮರೆಮಾಚಿ ಜನರನ್ನು ದಾರಿ ತಪ್ಪಿಸಲಾಗುತ್ತಿದೆ. ಇತಿಹಾಸ ಯಾವುದು, ಪುರಾಣ ಯಾವುದು ಎಂಬುದನ್ನೇ ಗುರುತಿಸಲಾಗದ ಸ್ಥಿತಿಯನ್ನು ಸಮಾಜದಲ್ಲಿ ನಿರ್ಮಿಸಲಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಭಾರತೀಯ ಸಮಾಜದ ರಚನೆ, ಅದರ ಅಸಮಾನತೆಗಳು ಮತ್ತು ಸಾಮಾಜಿಕ ಅನ್ಯಾಯಗಳ ಕುರಿತು ಅತ್ಯಂತ ಆಳವಾದ ಅಧ್ಯಯನ ನಡೆಸಿದ್ದರು. ರಾಮಾಯಣ, ಮಹಾಭಾರತ ಹಾಗೂ ಮನುಸ್ಮೃತಿ ಸೇರಿದಂತೆ ಹಲವು ಧಾರ್ಮಿಕ ಗ್ರಂಥಗಳ ಕುರಿತು ವಿಮರ್ಶಾತ್ಮಕವಾಗಿ ಬರೆಯುವ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿದರು. ಮನುಸ್ಮೃತಿಯಲ್ಲಿರುವ ಅಸಮಾನತೆಯ ವಿಚಾರಗಳನ್ನು ಜನರ ಮುಂದಿಟ್ಟ ಅವರು, ಶಸ್ತ್ರಗಳಿಗಿಂತ ಶಾಸ್ತ್ರಗಳೇ ಹೆಚ್ಚು ಅಪಾಯಕಾರಿ ಎಂಬ ಸಂದೇಶವನ್ನು ತಮ್ಮ ಚಿಂತನೆಗಳ ಮೂಲಕ ಸಮಾಜಕ್ಕೆ ಮನವರಿಕೆ ಮಾಡಿಕೊಟ್ಟರು. ಮಹಾಡ್ ಕೆರೆಯ ಹೋರಾಟ ಸೇರಿದಂತೆ ಅಂಬೇಡ್ಕರ್ ಅವರ ಸಾಮಾಜಿಕ ಚಳವಳಿಗಳು ಸಮಾನತೆಗಾಗಿ ನಡೆದ ಐತಿಹಾಸಿಕ ಹೋರಾಟಗಳಾಗಿವೆ ಎಂದು ಹೇಳಿದರು.

ಬೋಳಬಂಡೆಪ್ಪ ಅವರ ಬದುಕು, ಸಾಹಿತ್ಯ ಮತ್ತು ಹೋರಾಟದ ಚಿಂತನೆಗಳು ಇಂದಿನ ಸಮಾಜಕ್ಕೂ ಪ್ರೇರಣೆಯಾಗಿದ್ದು, ಅವರ ವಿಚಾರಗಳನ್ನು ಯುವಪೀಳಿಗೆಗೆ ತಲುಪಿಸುವ ಕೆಲಸ ನಿರಂತರವಾಗಿ ನಡೆಯಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಕೃತಿಯ ಪ್ರಧಾನ ಸಂಪಾದಕ ಟಿ.ಆರ್ ಶಾಂತಕುಮಾರ, ಪ್ರಮುಖರಾದ ಮಧುಕಾಂತ ಬೋಳಬಂಡೆಪ್ಪ, ಸಿ.ದಾನಪ್ಪ ಮಸ್ಕಿ, ಜೆ.ಎಲ್.ಈರಣ್ಣ, ಬಾಬು ಭಂಡಾರಿಗಲ್, ಭಗತ್‌ರಾಜ್ ನಿಜಾಮಕಾರಿ, ಆಂಜನೇಯ್ಯ ಜಾಲಿಬೆಂಚಿ, ಎಸ್.ಮಾರೆಪ್ಪ, ಎಂ.ವಿರುಪಾಕ್ಷಿ, ವೀರಹನುಮಾನ, ವೈ.ನರಸಪ್ಪ, ವೆಂಕಟೇಶ ಬೇವಿನಬೆಂಚಿ, ಗಂಗಮ್ಮ ಬೋಳಬಂಡೆಪ್ಪ, ಜ್ಯೋತಿ ರಾಜಶೇಖರ, ಡಿಂಗ್ರಿ ನರಸಪ್ಪ, ಅಂಬಣ್ಣ ಅರೋಲಿಕರ್, ಹುಸೇನಪ್ಪ ಅಮರಾಪೂರ ಸೇರಿದಂತೆ ಅನೇಕರಿದ್ದರು.

# ಜನರು ನನ್ನ ಕನಸಿಗೆ ನಗ್ತಿದ್ರು,100% ಎಥೆನಾಲ್‌ಗೆ ಒಪ್ಪಿಗೆ ನೀಡುವ ಫೈಲ್‌ಗೆ ಸಹಿ ಹಾಕಿದ್ದೇನೆ ಎಂದ ಗಡ್ಕರಿ-ನೋಡಿ

ನೀಡುವ ನಿಯಮಾವಳಿಗಳ ಕಡತಕ್ಕೆ ಸಹಿ ಹಾಕಿದ್ದೇನೆ ಎಂದು ಹೇಳಿದರು. ಭಾರತದ ಪಳೆಯುಳಿಕೆ ಇಂಧನಗಳ ಆಮದು ಅವಲಂಬನೆಯ ಕುರಿತು ಮಾತನಾಡಿದ ಗಡ್ಕರಿ, ಎಥೆನಾಲ್ ಪೆಟ್ರೋಲ್‌ಗೆ ಕಾರ್ಯಸಾಧ್ಯವಾದ ಪರ್ಯಾಯವಾಗಿ ಹೊರಹೊಮ್ಮುತ್ತದೆ. ಇದು ದೇಶದ 22 ಲಕ್ಷ ಕೋಟಿ ರೂಪಾಯಿ ಮೌಲ್ಯದ ಇಂಧನ ಆಮದು ಹೊರೆ ಇಳಿಸುತ್ತದೆ ಎಂದು ಹೇಳಿದರು. ಕ್ರಮೇಣ ದೇಶದಲ್ಲಿ ಗ್ಯಾಸ್ ಕೂಡಾ ಉತ್ಪಾದನೆಯಾಗಲಿದೆ. ಪೆಟ್ರೋಲ್ ಮತ್ತು ಡೀಸೆಲ್‌ಗೆ ಪರ್ಯಾಯವೂ ರೆಡಿಯಾಗಲಿದೆ ಎಂದು ತಿಳಿಸಿದರು.

ಶೇ.100ರಷ್ಟು ಎಥೆನಾಲ್‌ನಲ್ಲಿ ಚಲಿಸುವ 'ಫ್ಲೆಕ್ಸ್-ಫ್ಯೂಯಲ್' ಮಾದರಿಯಲ್ಲಿ ಬಿಡುಗಡೆಯಾಗುತ್ತಿರುವ ಮಾರುತಿ ಸುಜುಕಿಯ ವ್ಯಾಗನ್‌ಆರ್ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸಿದ ಕುರಿತು ಮಾತನಾಡುತ್ತಾ ಗಡ್ಕರಿ, ಶೇ.100ರಷ್ಟು ಎಥೆನಾಲ್‌ನಲ್ಲಿ ಚಲಿಸುವ ಮಾರುತಿ ಸುಜುಕಿ ವ್ಯಾಗನ್‌ಆರ್ ಬಿಡುಗಡೆ ಮಾಡುವ ಅವಕಾಶ ನನಗೆ ಸಿಕ್ಕಿರುವುದಕ್ಕೆ ಸಂತಸವಾಗಿದೆ. ಬಿಡುಗಡೆಯಾದ ಐದು ಮೋಟಾರ್‌ಸೈಕಲ್‌ಗಳಲ್ಲಿ ಮೂರು ಹೀರೋ ಮೋಟೋಕಾರ್ಪ್‌ನಿಂದ ಬಂದಿದ್ದು, ಹೀರೋ ಕಂಪನಿಯ ಎರಡು ಮೋಟಾರ್‌ಸೈಕಲ್‌ಗಳು ಈಗಾಗಲೇ ಶೇ.100ರಷ್ಟು ಎಥೆನಾಲ್‌ನಿಂದ ಬಿಡುಗಡೆಯಾಗಿವೆ ಎಂದು ವಿವರ ನೀಡಿದರು.

ಮುಂದಿನ ಎರಡು ತಿಂಗಳಲ್ಲಿ ಟೊಯೋಟಾ, ಸುಜುಕಿ ಮತ್ತು ಹುಂಡೈನಂತಹ ಕಂಪನಿಗಳು ಕೂಡಾ ಸಂಪೂರ್ಣವಾಗಿ ಶೇ.100ರಷ್ಟು ಎಥೆನಾಲ್‌ನಿಂದಲೇ ಚಲಿಸುವ ವಾಹನಗಳನ್ನು ಬಿಡುಗಡೆ ಮಾಡಲಿವೆ ಎಂದರು.

ಇಂಧನಕ್ಕೆ ಎಥೆನಾಲ್ ಮಿಶ್ರಣ ಮಾಡುವ ತಮ್ಮ ನಿಲುವಿನ ಕುರಿತು ಮಾತನಾಡುತ್ತಾ, ನಾನು ಈ ಕನಸಿನ ಬಗ್ಗೆ ಮಾತನಾಡುತ್ತಿದ್ದರೆ ಜನರು ನಗುತ್ತಿದ್ದರು. ನನ್ನ ಕೆಲವು ಸ್ನೇಹಿತರೂ ಸಹ ಇದನ್ನು ಟೀಕಿಸುತ್ತಿದ್ದರು ಎಂದು ನೆನಪಿಸಿಕೊಂಡರು. ಇದೇ ವೇಳೆ ಈ ಕುರಿತು ತಪ್ಪು ಮಾಹಿತಿಗಳನ್ನೂ ಹರಡಲಾಗುತ್ತಿತ್ತು ಎಂದು ತಿಳಿಸಿದರು.

ಈ ಕುರಿತು ಒಂದು ನಿದರ್ಶನವನ್ನು ತಿಳಿಸಿದ ಗಡ್ಕರಿ, ಒಮ್ಮೆ ವ್ಯಕ್ತಿಯೊಬ್ಬರು ನನಗೆ ಕರೆ ಮಾಡಿ, ತಮ್ಮ ಜೀಪ್ ಕೆಟ್ಟುಹೋಗಿದೆ. ವಾಹನವನ್ನು ಮೆಕ್ಯಾನಿಕ್ ಬಳಿಗೆ ತೆಗೆದುಕೊಂಡು ಹೋದಾಗ, ಎಥೆನಾಲ್ ಹಾಕಿದ್ದರಿಂದ ವಾಹನ ಕೆಟ್ಟಿದೆ ಎಂದು ತಿಳಿಸಿದ್ದಾಗಿ ಹೇಳಿದರು. ಅದಕ್ಕೆ ನಾನು, ನಿಮ್ಮ ಕಾರು ಪೆಟ್ರೋಲ್ ಅಥವಾ ಡೀಸೆಲ್‌ನಲ್ಲಿ ಚಲಿಸುತ್ತದೆಯೇ? ಎಂದು ಕೇಳಿದೆ. ಅದಕ್ಕವರು ಡೀಸೆಲ್ ಎಂದರು. ಆಗ ನಾನು, ನಾವು ಡೀಸೆಲ್‌ನಲ್ಲಿ ಎಥೆನಾಲ್ ಹಾಕುವುದಿಲ್ಲ. ಹಾಗಿದ್ದ ಮೇಲೆ ನಿಮ್ಮ ವಾಹನ ಹೇಗೆ ಕೆಟ್ಟುಹೋಯಿತು? ಎಂದು ಕೇಳಿದೆ. ಹೀಗೆ ತಪ್ಪು ಮಾಹಿತಿ ಹರಡುವ ಅನೇಕ ಪ್ರಯತ್ನಗಳು ನಡೆದವು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರ ಹನ್ನೆರಡು ವರ್ಷಗಳ ಆಡಳಿತದ ಕುರಿತು ಮಾತನಾಡಿದ ಅವರು, ವಿವಿಧ ವಲಯಗಳು ಹೇಗೆ ಅಭಿವೃದ್ಧಿಯಾಗಿವೆ ಎಂಬುದನ್ನು ವಿವರಿಸಿದರು.

ಡಬಲ್-ಎಂಜಿನ್ ಸರ್ಕಾರಕ್ಕೆ ಧನ್ಯವಾದಗಳು. ನಾಗ್ಪುರ ವಿವಿಧ ವಲಯಗಳಲ್ಲಿ ಗಮನಾರ್ಹ ಕೆಲಸಗಳಿಗೆ ಸಾಕ್ಷಿಯಾಗಿದೆ. ಇಂಥ ಯೋಜನೆಗಳಲ್ಲಿ ಆಕ್ಸಿಜನ್ ಪಾರ್ಕ್ ಮತ್ತು ಬರ್ಡ್ ಪಾರ್ಕ್ ಸೇರಿವೆ. ನಾವು ಪ್ರಸ್ತುತ ಸಾಹಸ ಉದ್ಯಾನವನವನ್ನೂ ಅಭಿವೃದ್ಧಿಪಡಿಸುತ್ತಿದ್ದೇವೆ. ಮೆಟ್ರೋದ 1ನೇ ಹಂತ ಪೂರ್ಣಗೊಳಿಸಿದ್ದೇವೆ. ಈಗ 3ನೇ ಹಂತಕ್ಕಾಗಿ ವಿವರವಾದ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುತ್ತಿದ್ದೇವೆ. ಏಮ್ಸ್ ನಾಗ್ಪುರ, ಐಐಎಂ, ರಾಷ್ಟ್ರೀಯ ಕಾನೂನು ವಿಶ್ವವಿದ್ಯಾಲಯ ಮತ್ತು ಐಐಐಟಿ ಬುಟಿಬೋರಿಯಂತಹ ಪ್ರಮುಖ ಸಂಸ್ಥೆಗಳನ್ನು ಸ್ಥಾಪಿಸಲಾಗಿದೆ ಎಂದರು.

# ಗ್ಯಾರಂಟಿ ಪರಿಷ್ಕರಣೆಗೆ ಮುಂದಾಗಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯ ಬಿಜೆಪಿ ನಾಯಕರು ಗರಂ!

**ಬೆಂಗಳೂರು,ಜೂ.14**-ಕಮಿಷನ್ ಮಾಸ್ಟರ್ ಡಿ. ಕೆ. ಶಿವಕುಮಾರ್ ಅವರ ಹೊಸ ಅರ್ಜಿಯ ಹಿಂದೆ ಇರುವುದು ಅರ್ಹತೆಯ ಅಳತೆಗೋಲಲ್ಲ, ಫಲಾನುಭವಿಗಳಿಗೆ ಕತ್ತರಿ ಹಾಕುವ ಒಳಸಂಚು ಎಂದು ವಿಪಕ್ಷ ನಾಯಕ ಆರ್. ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, ಗೃಹಲಕ್ಷ್ಮಿಗೆ ಕಷ್ಟ,'ಗೃಹಜ್ಯೋತಿಗೆ ಕತ್ತಲು! ಅನರ್ಹರ ನೆಪದಲ್ಲಿ ಬಡವರ ಹಕ್ಕು ಕಬಳಿಸಲು ಬಂದಿದೆ ಹೊಸ ಅರ್ಜಿ ಎಂಬ ಹೊಸ ಕತ್ತರಿ. ಕಮಿಷನ್ ಮಾಸ್ಟರ್ ಸಿಎಂ ಡಿಕೆಶಿ ಅವರೇ, ಸತ್ತವರ ಹೆಸರನ್ನು ಫಲಾನುಭವಿಗಳ ಪಟ್ಟಿಯಿಂದ ತೆಗೆಯಲು ಇಡೀ ಗ್ಯಾರೆಂಟಿ ಯೋಜನೆಗೆ ಹೊಸ ಅರ್ಜಿ ಸಲ್ಲಿಸಬೇಕೇ?. ಇದಾವ ಸೀಮೆಯ ತುಘಲಕ್ ದರ್ಬಾರ್ ಸ್ವಾಮಿ?. ಅನರ್ಹರನ್ನು ತಡೆಯುವ ನೆಪದಲ್ಲಿ, ಈಗಾಗಲೇ ಸೌಲಭ್ಯ ಪಡೆಯುತ್ತಿರುವ ಲಕ್ಷಾಂತರ ಸ್ವಾಭಿಮಾನಿ ತಾಯಂದಿರು ಮತ್ತು ಜನಸಾಮಾನ್ಯರನ್ನು ಮತ್ತೆ ಕಚೇರಿಗಳ ಮುಂದೆ, ಸೈಬರ್ ಸೆಂಟರ್‌ಗಳ ಮುಂದೆ ಸಾಲಿನಲ್ಲಿ ನಿಲ್ಲಿಸಲು ನಿಮಗೆ ನಾಚಿಕೆಯಾಗುವುದಿಲ್ಲವೇ ಎಂದು ಕಿಡಿಕಾರಿದ್ದಾರೆ.

ನಿಮ್ಮ ಸರ್ಕಾರದ ಕಮಿಷನ್ ದಂಧೆ ಹಾಗೂ ದುರಾಡಳಿತದಿಂದಾಗಿ ರಾಜ್ಯದ ಬೊಕ್ಕಸ ಸಂಪೂರ್ಣ ದಿವಾಳಿಯಾಗಿದೆ. ಗ್ಯಾರಂಟಿ ನೀಡಲು ಹಣವಿಲ್ಲದೆ, ಈಗ ಜನರಿಗೆ ತೊಂದರೆ ಕೊಟ್ಟು ಫಲಾನುಭವಿಗಳ ಸಂಖ್ಯೆಯನ್ನು ಕಡಿತಗೊಳಿಸುವುದೇ ನಿಮ್ಮ ಅಸಲಿ ಅಜೆಂಡಾ ಎನ್ನುವ ಸತ್ಯವನ್ನು ಅರಿಯದಷ್ಟು ಅಮಾಯಕರಲ್ಲ ನಮ್ಮ ಸ್ವಾಭಿಮಾನಿ ಕನ್ನಡಿಗರು. ಮನೆಗೆ ತಲುಪಲಿದೆ ನಮೂನೆ ಎಂಬ ನಿಮ್ಮ ಹೊಸ ನಾಟಕ ಯಾರಿಗಾಗಿ ಎಂದು ಅವರು ಪ್ರಶ್ನಿಸಿದ್ದಾರೆ. ಕೇವಲ ತಾಂತ್ರಿಕ ವ್ಯವಸ್ಥೆಯನ್ನು ಸರಿಪಡಿಸಿ ಸತ್ತವರ ಹೆಸರನ್ನು ತೆಗೆಯಲು ಯೋಗ್ಯತೆ ಇಲ್ಲದ ಈ ಸರ್ಕಾರಕ್ಕೆ ಕಮಿಷನ್ ಮಾಸ್ಟರ್ ಎಂಬ ಬಿರುದು ಬಿಟ್ಟರೆ ಬೇರೇನು ನೀಡಲು ಸಾಧ್ಯ?. ಇದು ಹೊಸ ಅರ್ಜಿಯ ಹೆಸರಿನಲ್ಲಿ ಬಡವರ ಹೊಟ್ಟೆಗೆ ಹೊಡೆದು, ಯೋಜನೆಗಳನ್ನು ಹಂತಹಂತವಾಗಿ ನಿಲ್ಲಿಸುವ ಒಳಸಂಚು ಅಲ್ಲದೆ ಮತ್ತೇನು?. ಅಧಿಕಾರಿಗಳ ಸಭೆ ನಡೆಸಿ ಹಿತವಚನ ನೀಡುವ ಮುನ್ನ, ನಿಮ್ಮ ಗ್ಯಾರಂಟಿ ದುಡ್ಡಿನಲ್ಲಿ ಎಷ್ಟು ಭಾಗ ನಿಮ್ಮ ಕುರ್ಚಿ ಉಳಿಸಿಕೊಳ್ಳಲು ಹೈಕಮಾಂಡ್ ಗೆ, ಎಷ್ಟು ಭಾಗ ಬೇರೆ ರಾಜ್ಯಗಳ ಚುನಾವಣಾ ಫಂಡಿಂಗ್‌ಗೆ ಹೋಗುತ್ತಿದೆ ಎಂಬುದನ್ನು ಸ್ಪಷ್ಟಪಡಿಸಿ ಎಂದು ಆರ್ ಅಶೋಕ್ ಆಗ್ರಹಿಸಿದ್ದಾರೆ. ಬಡವರ, ಶೋಷಿತರ ಹಕ್ಕಿನ ದುಡ್ಡಿಗೆ ಕತ್ತರಿ ಹಾಕಲು ಹೊರಟಿರುವ ನಿಮ್ಮ ಈ ಜನವಿರೋಧಿ ನೀತಿಯನ್ನು ಸ್ವಾಭಿಮಾನಿ ಕನ್ನಡಿಗರು ಸಹಿಸುವುದಿಲ್ಲ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಸಾಲಿನಲ್ಲಿ ನಿಲ್ಲಿಸಿ ಕಾಟ ಕೊಡುವುದನ್ನು ತಕ್ಷಣ ನಿಲ್ಲಿಸಿ. ಬೊಕ್ಕಸದ ದುಡ್ಡನ್ನು ಲೂಟಿ ಹೊಡೆಯುವುದನ್ನು ಬಿಟ್ಟು, ಜನರಿಗೆ ಕೊಟ್ಟ ಮಾತಿನಂತೆ ಗ್ಯಾರಂಟಿ ಸೌಲಭ್ಯಗಳನ್ನು ತಲುಪಿಸಿ.





ಇಲ್ಲದಿದ್ದರೆ ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷವನ್ನು ಗಂಟು ಮೂಟೆ ಕಟ್ಟಿಸಿ ಶಾಶ್ವತವಾಗಿ ಮನೆಗೆ ಕಳುಹಿಸುವುದು ಗ್ಯಾರಂಟಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ಯಾರಂಟಿ ಕೊಡುವಾಗ ಏಕೆ ಯೋಚಿಸಿಲ್ಲ: ಈ ಸಂಬಂಧ ಆಕ್ರೋಶ ಹೊರಹಾಕಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಗ್ಯಾರಂಟಿಯಿಂದ ಆರ್ಥಿಕ ಸಂಕಷ್ಟ, ಪೆಟ್ಟು ಬಿದ್ದಿದೆ. ಒಂದೊಂದೇ ನೆಪಗಳನ್ನು ಒಡ್ಡಿ ಈಗ ಗ್ಯಾರಂಟಿ ಫಲಾನುಭವಿಗಳ ಸಂಖ್ಯೆಯನ್ನು ಲಕ್ಷ ಲಕ್ಷದಷ್ಟು ಇಳಿಸುವ ದುಸ್ಸಾಹಸಕ್ಕೆ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ. ಯಾರು ಅರ್ಹರಿದ್ದಾರೋ ಅವರಿಗೆ ಕೊಡಬೇಕು ಎಂಬುದರಲ್ಲಿ ಎರಡು ಮಾತಿಲ್ಲ. 3 ವರ್ಷದ ಕೆಳಗೆ ಇವರದೇ ಸರ್ಕಾರ ಇತ್ತಲ್ಲವೇ?. ಗ್ಯಾರಂಟಿ ಕೊಡುವಾಗ ಅರ್ಹತೆ, ಅನರ್ಹತೆಯನ್ನು ಯಾಕೆ ಯೋಚಿಸಿಲ್ಲ ಎಂದು ಪ್ರಶ್ನಿಸಿದರು.

ಗ್ಯಾರಂಟಿಯಿಂದ ಕ್ಷೇತ್ರದ ಅಭಿವೃದ್ಧಿ ಆಗುತ್ತಿಲ್ಲ ಎಂದು ಕಾಂಗ್ರೆಸ್ಸಿನ ಶಾಸಕರಾದ ದೇಶಪಾಂಡೆ ಹೇಳುತ್ತಾರೆ. ಗ್ಯಾರಂಟಿಯಿಂದ ಅಭಿವೃದ್ಧಿ ಆಗದೇ ಆತ್ಮಹತ್ಯೆ ಮಾಡಿಕೊಳ್ಳುವಂಥ ಸ್ಥಿತಿ ಇದೆ ಎಂದು ಕಾಂಗ್ರೆಸ್ ಶಾಸಕರೇ ಹೇಳಿದ್ದಾರೆ. ಹಿಂದಿನ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ್ ರಾಯರೆಡ್ಡಿ ಅವರೂ ಗ್ಯಾರಂಟಿಗಳಿಂದ ಸಂಕಷ್ಟ ಆಗಿದೆ ಎಂದು ಒಪ್ಪಿಕೊಂಡಿದ್ದಾರೆ. ಈ ಎಲ್ಲಾ ವಾಸ್ತವ ಸತ್ಯ ಮರೆಮಾಚಿ ಲಕ್ಷ ಲಕ್ಷ ಅನರ್ಹ ಫಲಾನುಭವಿಗಳಿಗೆ ಚುನಾವಣೆ ವೇಳೆ ಗ್ಯಾರಂಟಿ ಕೊಟ್ಟು ಆಗ ಹೇಳಿದ್ದು ಒಂದು, ಈಗ ಹೇಳೋದು ಒಂದು. ಚುನಾವಣೆ ಮೊದಲು ಅರ್ಹರಾದವರು ಚುನಾವಣೆ ಆದ ನಂತರ ಅನರ್ಹ ಎಂದು ಹೇಳುವುದು ಜನರಿಗೆ ಮಾಡಿದ ಅಪಮಾನ. ಇದು ಸರಿ ಅಲ್ಲ ಎಂದು ಟೀಕಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಷಡ್ಯಂತ್ರ: ಧರ್ಮಸ್ಥಳದ ಬುರುಡೇ ಪ್ರಕರಣ ಕಾಂಗ್ರೆಸ್ ಸರ್ಕಾರದ ಷಡ್ಯಂತ್ರ. ಆಗಿನ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಹಾದಿಬೀದಿಯಲ್ಲಿ ಹೋಗುವ ನಗರ ನಕ್ಸಲರ ಮಾತು ಕೇಳಿ ಎಸ್‌ಐಟಿ ರಚಿಸಿದರು. ಅದರ ಅಗತ್ಯ ಇರಲಿಲ್ಲ. ಇದೇ ಈಗ ಸರ್ಕಾರಕ್ಕೆ ಗಂಡಾಂತರ ತಂದಿದೆ. ಇಡೀ ದೇಶದ ಮೂಲೆ ಮೂಲೆಯಿಂದ ಕೋಟಿ ಭಕ್ತರು ಧರ್ಮಸ್ಥಳಕ್ಕೆ ಬರ್ತಾರೆ.

ಎಸ್ ಐಟಿ ರಚಿಸಲು ಸಿಎಂ ವಿವೇಚನೆ ಬಳಸಬೇಕಿತ್ತು ಎಂದು ಮಾಧ್ಯಮಗಳ ಪ್ರಶ್ನೆಯೊಂದಕ್ಕೆ ತಿಳಿಸಿದರು. ಬುರುಡೆ ಪ್ರಕರಣದಲ್ಲಿ ನೂರಾರು ಕೋಟಿ ಅವ್ಯವಹಾರ ಆಗಿದೆ ಎಂಬ ವರದಿಗಳಿವೆ. ಇದಕ್ಕೆಲ್ಲ ಕಾಂಗ್ರೆಸ್ ಸರ್ಕಾರವೇ ಹೊಣೆ. ಅವರ ಆಸಕ್ತಿ ಏನಿತ್ತು ಎಂಬುದು ತಿಳಿಯಲಿ ಎಂದರು.

ಸಚಿವ ಸಂಪುಟಕ್ಕೆ ಎರಡೇ ಕೋಟಾ: ಸಚಿವ ಸಂಪುಟಕ್ಕೆ ಸೇರಲು ಎರಡು ಕೋಟಾಗಳಿವೆ. ಒಂದು ಮ್ಯಾನೇಜ್ ಮೆಂಟ್ ಕೋಟಾ ಮತ್ತೊಂದು ಪೇಮೆಂಟ್ ಕೋಟಾ ಎರಡರಲ್ಲಿ ಯಾವುದು ಬೇಕು ಎಂದು ಮೊದಲೇ ತೀರ್ಮಾನ ಆಗಿ ಸಚಿವರಾಗ್ತಾರೆ ಎಂದು ವಿಜಯೇಂದ್ರ ವ್ಯಂಗ್ಯವಾಡಿದರು.

# ಉಚಿತ ಯೋಗಶಿಬಿರ: ದೇಹ ಮತ್ತು ಮನಸ್ಸು ಸಧೃಢವಾಗಿರಲು ಯೋಗ ಸಹಕಾರಿ-ಶ್ರೀಪಾದ

ಹಗುರುಗೊಳಿಸಲು ಧಾನ್ಯ ಅವಶ್ಯಕವಾಗಿದೆ.

ಯೋಗವೆಂದರೆ ಜೋಡಿಸುವದು ಎಂದರ್ಥ. ಮನಸ್ಸು, ದೇಹ ಆರೋಗ್ಯ ಎರಡನ್ನು ಶುದ್ದವಾಗಿರಿಸಿಕೊಳ್ಳಲು ಯೋಗ ನಿರಂತರವಾಗಿ ರೂಢಿಸಿಕೊಳ್ಳಬೇಕಿದೆ. ಕೇವಲ ಶಿಬಿರಕ್ಕೆ ಮಾತ್ರ ಯೋಗ ಸೀಮಿತವಾಗದೇ ನಿತ್ಯದ ಜೀವನದಲ್ಲಿಯೋ ಯೋಗ ಭಾಗವಾಗಬೇಕಾಗುತ್ತದೆ.

ಯಾವುದೇ ವಯಸ್ಸಿನ ಮಿತಿಯಿಲ್ಲದೇ ಯೋಗವನ್ನು ಎಲ್ಲರೂ ರೂಢಿಸಿಕೊಳ್ಳಬೇಕೆಂದರು.ಮಹಿಳೆಯರು ಹಾಗೂ ಅನೇಕರು ಯೋಗ ಶಿಬಿರದಲ್ಲಿ ಭಾಗಿಯಾದರು. ಪತಂಜಲಿ ಯೋಗ ಸಮಿತಿಯ ವಿಠೋಬರಾವ್, ಡಾ.ಪರಮೇಶ್ವರ ಸಾಲಿಮಠ, ಶ್ರೀದೇವಿ ಅಶೋಕ ಪಾಟೀಲ್, ನಾಗರಾಜ ಗುಲ್ದಾಸ್ ಸೇರಿದಂತೆ ಅನೇಕರಿದ್ದರು.

# ಡಾ. ರಾಜಶಂಕರ್ ಎನ್. ಜನ್ಮದಿನ ಅಂಗವಾಗಿ 100 ಗಿಡಗಳ ನೆಡುವ ಕಾರ್ಯಕ್ರಮ

ಉಪಯುಕ್ತವಾಗುವ ಕಾರ್ಯಗಳ ಮೂಲಕ ಆಚರಿಸುವುದು ಮಾದರಿಯಾಗಿದೆ ಎಂದು ಪ್ರತಿಯೊಬ್ಬರೂ ತಮ್ಮ ಜೀವನದ ವಿಶೇಷ ದಿನಗಳಲ್ಲಿ ಕನಿಷ್ಠ ಒಂದು ಗಿಡವನ್ನು ನೆಟ್ಟು ಅದರ ಪೋಷಣೆಯ ಜವಾಬ್ದಾರಿಯನ್ನು ವಹಿಸಿಕೊಂಡರೆ ಪರಿಸರ ಸಂರಕ್ಷಣೆಗೆ ಮಹತ್ವದ ಕೊಡುಗೆ ನೀಡಿದಂತಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶರಣರೆಡ್ಡಿ, ಜನಾರ್ದನ ರೆಡ್ಡಿ ಅಂಹನಾಳ, ವಿಜಯ್ ಭಾಸ್ಕರ್ ರೆಡ್ಡಿ, ಮೌನೇಶ್, ಭೀಮೇಶ್, ಶಿಲ್ಪಾ ಮ್ಯಾಡಂ, ಹನುಮಾನ್ ಚಾಲೀಸಾ ಜನಸೇವಾ ಅಧ್ಯಕ್ಷ ವೀರೇಶ್ ಪಿ., ಶ್ರೀ ವರಸಿದ್ಧಿ ಆಂಜನೇಯ ಸ್ವಾಮಿ ದೇವಸ್ಥಾನದ ಕಾರ್ಯದರ್ಶಿ ರವಿಕಿರಣ್ ಗೌಡ, ಸದಸ್ಯರಾದ ರಾಘವೇಂದ್ರ, ಲಕ್ಷ್ಮಣ್ ಮಾಸ್ಟರ್, ಶಾಂತಯ್ಯ ಸ್ವಾಮಿಗಳು ಸೇರಿದಂತೆ ಅನೇಕ ಗಣ್ಯರು,

ಸಮಾಜದ ಮುಖಂಡರು, ಪರಿಸರ ಪ್ರೇಮಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಗಿಡಗಳನ್ನು ನೆಟ್ಟು ಕಾರ್ಯಕ್ರಮಕ್ಕೆ ಯಶಸ್ಸು ತಂದುಕೊಟ್ಟರು. ಕಾರ್ಯಕ್ರಮದ ಅಂತ್ಯದಲ್ಲಿ ನೆಡಲಾದ ಗಿಡಗಳನ್ನು ಸಂರಕ್ಷಿಸುವ ಜವಾಬ್ದಾರಿಯನ್ನು ಎಲ್ಲರೂ ಒಟ್ಟಾಗಿ ವಹಿಸಿಕೊಳ್ಳುವ ಸಂಕಲ್ಪ ಮಾಡಲಾಯಿತು.

# ಸಂಘಟಿತವಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು-ನವೀನರೆಡ್ಡಿ

ಆದರೂ ಲಾರಿ ಮಾಲೀಕರು ಟೆಕ್ಸ್ ಕಟ್ಟುತ್ತಿದ್ದಾರೆ ಹೊರತು ಪ್ರಶ್ನಿಸುವ ಕೆಲಸವಾಗುತ್ತಿದೆ. ಫೆಡರೇಷನ್ ಕೋರ್ಟ ಮೊರೆ ಹೋಗಿ ತಡೆಯಾಜ್ಞೆ ತಂದಿದೆ. ಆದರೂ ಲಾರೀ ಮಾಲೀಕರು ಜಾಗೃತರಾಗುತ್ತಿಲ್ಲ. ಡಿಸೇಲ್ ಬೆಲೆ ಏರಿದಂತೆ ಬಿಡಿಭಾಗಳ ಬೆಲೆ ಏರಿಕೆಯಾಗಿ ನಿರ್ವಹಣಾ ವೆಚ್ಚ ಹೆಚ್ಚಳವಾಗಿದೆ. ಆದರೆ ಬಾಡಿಗೆ ಹಣ ಮಾತ್ರ ನಿರೀಕ್ಷೆಯಲ್ಲಿ ಏರಿಕೆಯಾಗಿಲ್ಲ ಸಾಲ ಮಾಡಿದ ಖರೀದಿಸಿದ ಲಾರಿ ಕಂತು ಕಟ್ಟಲಾಗದ ಸ್ಥಿತಿಯಲ್ಲಿ ಲಾರಿ ಮಾಲೀಕರಿದ್ದಾರೆ.

ಪ್ರತಿಭಟನೆ ಕರೆ ಕೊಟ್ಟರೆ ಸಾಲ ಕಟ್ಟುವ ನೆಪದಲ್ಲಿ ಯಾರು ಬರುತ್ತಿಲ್ಲ. ಸಮಸ್ಯೆಗಳು ಪರಿಹಾರವಾಗುತ್ತಿಲ್ಲ. ಲಾರಿಗಳಿಗೆ ವಿಎಲ್‌ಟಿಡಿ ಸಾಧನವನ್ನು ರಾಷ್ಟ್ರೀಯ ರಹದಾರಿ ಹೊಂದಿರುವ ಸರಕು ಲಾರಿಗಳಿಗೆ ಅಳವಡಿಸಲು ಸರ್ಕಾರ ಮುಂದಾಗಿದೆ. 7599 ರೂ ಬೆಲೆ ನಿಗಧಿ ಮಾಡಿದ್ದರೂ 17 ಸಾವಿರ ರೂವಸೂಲಿ ಮಾಡಲಾಗುತ್ತಿದೆ. ಬಿಲ್ ಕೊಡುತ್ತಿಲ್ಲ. ಆದರೂ ಲಾರಿ ಮಾಲೀಕರು ಪ್ರಶ್ನಿಸುತ್ತಿಲ್ಲ. ಸಂಘಟಿತರಾಗಿ ಸರ್ಕಾರ ಮೇಲೆ ಒತ್ತಡ ಹಾಕುವಕಾಲ ಬಂದಿದೆ. ಶೇ15 ರಿಂದ 20 ರಷ್ಟ ಬಾಡಿಗೆ ಹೆಚ್ಚಿಸಲು ಹೋರಾಟಕ್ಕೆ ಬೆಂಬಲವಾಗಿ ನಿಲ್ಲಿ ಎಂದು ಮನವಿ ಮಾಡಿದರು. ಸಭೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ನಾರಾಯಣಪ್ರಸಾದ ಚಾಮರಾಜನಗರದಲ್ಲಿ ನಡೆದ 34 ನೇ ವಾರ್ಷಿಕ ಸಭೆ ನಡುವಳಿಯನ್ನು ಓದಿದರು. ಸಂಘದ ಜಿಲ್ಲಾಧ್ಯಕ್ಷ ಸೈಯದ್ ಹಸನ್, ರಾಜ್ಯ ಉಪಾಧ್ಯಕ್ಷರುಗಳಾದ ಎನ್.ಶ್ರೀನಿವಾಸ ರಾವ್, ಮನ್ಸೂರು ಇಬ್ರಾಹಿಂ, ರಾಮಸ್ವಾಮಿ ರೆಡ್ಡಿ, ಮಲ್ಲಿಕಾರ್ಜುನ, ಸಂಜಯಕುಮಾರ, ಚಂದ್ರಶೇಖರ, ಮುದ್ದುಹನುಮೇಗೌಡ ಸೇರಿ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಸಂಘದ ಪದಾಧಿಕಾರಿಗಳು, ಪ್ರತಿನಿಧಿಗಳು ಭಾಗಿಯಾದರು.

# ತಪ್ಪಿಸಿಕೊಳ್ಳಲು ಯತ್ನಿಸಿದ ಆರೋಪ್ಪಿ ಕಾಲಿಗೆ ಪೊಲೀಸರ ಗುಂಡೇಟು

ಹೊಳೆ ಬೆನವಳ್ಳಿಯ ರಿಂಗ್ ರೋಡ್ ಬಳಿ ಜೀಪ್‌ನಿಂದ ಕೆಳಗೆ ಇಳಿಸಿದ್ದರು. ಈ ವೇಳೆ ಕೋಟೆ ಪೊಲೀಸ್ ಠಾಣೆಯ ಕಾನ್ಸಟೇಬಲ್ ಅಂಜನಪ್ಪ ಅವರ ಮೇಲೆ ಹಲ್ಲೆ ನಡೆಸಿ, ಪರಾರಿಯಾಗಲು ಯತ್ನಿಸಿದ್ದಾನೆ. ಆಗ ಶರಣಾಗುವಂತೆ ಕೋಟೆ ಠಾಣೆಯ ಪಿಐ ಹರೀಶ್ ಪಟೇಲ್ ಅವರು ಸೂಚಿಸಿದರೂ ಸಹ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನ್. ಈ ವೇಳೆ ಪಿಎಸ್‌ಐ ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ.್ ಆದರೂ ಶರಣಾಗದೆ ಹೋದಾಗ ಆತ್ಮ ರಕ್ಷಣೆಗೆ ಮಧು ಕಾಲಿಗೆ ಪಿಎಸ್‌ಐ ಗುಂಡು ಹಾರಿಸಿದ್ದಾರೆ. ಪರಿಣಾಮ ಗಾಯಗೊಂಡ ಮಧುವನ್ನು ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಆಸ್ಪತ್ರೆಗೆ ಎಸ್‌ಪಿ ನಿಖಿಲ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ರೌಡಿಶೀಟರ್ ನರಸಿಂಹನ ಕೊಲೆ ಪ್ರಕರಣ: ಜೂನ್ 12 ರಂದು ಗಾಂಧಿ ಬಜಾರ್ನ ಕರಿದೇವರ ಕೇರಿಯಲ್ಲಿ ರೌಡಿಶೀಟರ್ ನರಸಿಂಹನ ಕೊಲೆಯಾಗಿತ್ತು. ಇಸ್ಪಿಟ್ ಆಡುತ್ತಿದ್ದಾಗ ನರಸಿಂಹನ ಮೇಲೆ ವಿರೋಧಿ ಗ್ಯಾಂಗ್ ಅನಿಲ್ ಅಲಿಯಾಸ್ ಅಂಬು ಹಾಗೂ ಆತನ ಸಹಚರರಾದ ಮಧು, ರವಿ, ಕಾರ್ತಿಕ್ ಅಲಿಯಾಸ್ ಕತ್ತೆ ಕಾರ್ತಿಕ್, ಶಬರೀಶ್ ಎಂಬುವರು ಬೈಕ್‌ನಲ್ಲಿ ಬಂದು ಮಾರಕಾಸ್ತ್ರಗಳಿಂದ್ ಕೊಚ್ಚಿ ಕೊಲೆ ಮಾಡಿದ್ದರು. ಪ್ರಕರಣ ದಾಖಲಿಸಿಕೊಂಡ ಕೋಟೆ ಪೊಲೀಸರು ಆರೋಪಿಗಳನ್ನು ಭದ್ರಾವತಿಯಲ್ಲಿ ಬಂಧಿಸಿದ್ದರು.

ಕೊಲೆಯಾದ ನರಸಿಂಹನ ಪತ್ನಿ ಸ್ನೇಹ ಅವರು ಅಂಬು ಮತ್ತು ಅವರ ತಂಡ ಕೊಲೆ ಮಾಡಿದೆ ದೂರು ನೀಡಿದ್ದರು. ಆ ಬಳಿಕ ಪೊಲೀಸರು ಮೂರು ತಂಡಗಳನ್ನು ರಚಿಸಿ ತನಿಖೆ ಪ್ರಾರಂಭಿಸಿದ್ದರು. ಪರಾರಿಯಾಗಿದ್ದ ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದರು. ಕೊನೆಗೆ ಭದ್ರಾವತಿಯಲ್ಲಿ ಆರೋಪಿಗಳನ್ನು ಬಂಧಿಸಿದ್ದರು. ಸ್ಥಳ ಮಹಜರಿಗೆ ಕರೆದಯ್ಯುವ ವೇಳೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದರಿಂದ ಮಧು ಕಾಲಿಗೆ ಪೊಲೀಸರು ಗುಂಡು ಹಾರಿಸಿದ್ದಾರೆ. ಇನ್ನು ಕೊಲೆಯಾದ ನರಸಿಂಹ ವಿರುದ್ಧ ದೊಡ್ಡಪೇಟೆ ಪೊಲೀಸ್ ಠಾಣೆಯಲ್ಲಿ ಹಲವು ಪ್ರಕರಣಗಳು ದಾಖಲಾಗಿದ್ದವು.

# ಪಂಚ ಗ್ಯಾರಂಟಿ ಯೋಜನೆ ನಿಲ್ಲುವುದಿಲ್ಲ ಪ್ರತಿಪಕ್ಷಗಳ ವದಂತಿಗಳಿಗೆ ಕಿವಿಗೊಡಬೇಡಿ-ಸಿಎಂ

ಗೃಹಲಕ್ಷ್ಮಿ ಯೋಜನೆಯಲ್ಲಿ ಅನರ್ಹರು 100 ಕೋಟಿ ರೂ. ಹಣ ತೆಗೆದುಕೊಂಡಿದ್ದಾರೆ. ಅದರ ತನಿಖೆ ಮಾಡಿದ್ದೇವೆ. ಕರೆ ಮಾಡಿದರೆ ಯಾರದ್ದೋ ಮನೆಗೆ ದೂರವಾಣಿ ಕರೆ ಹೊಗುತ್ತಿದೆ. ಯಾವ ಬ್ಯಾಂಕ್‌ಗೆ ಹಣ ಜಮೆ ಆಗುತ್ತಿದೆ? ಅರ್ಹ ಫಲಾನುಭವಿಗಳಿಗೇ ಹಣ ಹೋಗುತ್ತಿದೆಯಾ? ಇತರೆ ಯಾವುದಾದರೂ ಯೋಜನೆಗಳಿಗೆ, ಸಾಲಕ್ಕೆ ಆ ಹಣ ಹೋಗುತ್ತಿದೆಯಾ ಎಂಬುದನ್ನು ತಿಳಿಯಬೇಕಾಗಿದೆ. ಹೀಗಾಗಿ ಮತ್ತೆ ಅರ್ಜಿ ಕೊಡಬೇಕು. ಗ್ಯಾರಂಟಿ ಹಣ ನಿಲ್ಲಿಸಲ್ಲ. ಮನೆಯ ಅರ್ಹ ಯಜಮಾನಿಗೇ ಹಣ ಹೋಗಬೇಕು. ಹಣ ದುರುಪಯೋಗ ಆಗುವುದಕ್ಕೆ ಕಡಿವಾಣ ಹಾಕಬೇಕಾಗಿದೆ ಎಂದಿದ್ದರು.

ಮನೆ ಮನೆಗೆ ಹೋಗಿ ಭೇಟಿ ನೀಡಿ ಅರ್ಜಿ ಕೊಟ್ಟು ಮಾಹಿತಿ ಕೇಳಿದ್ದೇವೆ. ಗೃಹಜ್ಯೋತಿ ಯೋಜನೆಯಡಿ ಸದ್ಯ 1.64 ಲಕ್ಷ ಫಲಾನುಭವಿಗಳಿದ್ದಾರೆ.

ಅವರೇ ಫಲಾನುಭವಿಗಳಾ, ಅರ್ಹರಾ? ಹಲವೆಡೆ ಗೃಹ ಜ್ಯೋತಿಯಡಿ ಗೃಹ ಬಳಕೆ ಜೊತೆಗೆ ವಾಣಿಜ್ಯ ಉದ್ದೇಶಕ್ಕೂ ಬಳಸಲಾಗುತ್ತಿದೆ. ಹೀಗಾಗಿ ನಾವು ಅರ್ಜಿಯನ್ನು ಕೊಡಲು ಆರಂಭ ಮಾಡುತ್ತೇವೆ. ಮಾಹಿತಿ ಪಡೆದು ಅರ್ಹರಿಗೆ ಮಾತ್ರ ಯೋಜನೆ ತಲುಪುವಂತೆ ಮಾಡುತ್ತೇವೆ ಎಂದು ಹೇಳಿದ್ದರು.

# ಪಾಮನಕಲ್ಲೂರಿನಲ್ಲಿ ಆರ್‌ಕೆಬಿ ಫೌಂಡೇಶನ್ ನಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ

ಮ್ಯಾನೇಜರ್ ರಾಹುಲ್ ಕುಮಾರ ಮಾತಾನಾಡುತ್ತಾ ಎಮ್.ಕೆ. ಭಂಡಾರಿ ಆಸ್ಪತ್ರೆಯವರು ನಮ್ಮ ಸ್ಥಳಕ್ಕೆ ಬಂದು ನಮ್ಮ ಸಿಬ್ಬಂದಿಗಳಿಗೆ ಉಚಿತ ಆರೋಗ್ಯ ತಪಾಸಣಾ ಮಾಡುತ್ತಿದ್ದಾರೆ ಅವರಿಗೆ ನಮ್ಮ ಕಂಪನಿಯ ವತಿಯಿಂದ ಅನಂತ ಧನ್ಯವಾದಗಳನ್ನು ಅರ್ಪಿಸುತ್ತಿದ್ದೇನೆ. ಇವರುಗಳು ನೂರಾರು ಸಂಖ್ಯೆಯಲ್ಲಿ ನಮ್ಮ ಸಿಬ್ಬಂದಿಯವರಿಗೆ ತಪಸಾಣೆ ಮಾಡಿ ಒಳ್ಳೆಯ ರೀತಿಯಲ್ಲಿ ಸಲಹೆಯನ್ನು ಕೊಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಸಿಬ್ಬಂದಿಯವರಿಗೆ ಏನಾದರೂ ತೊಂದರೆಯಾದಲ್ಲಿ ನಿಮ್ಮ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಳ್ಳುತ್ತೇವೆ ಎಂದು ಹೇಳಿದರು.

ಬಿ.ಆರ್. ಇನ್‌ಫ್ರೋ ಪ್ರೋಜೆಕ್ಟ್ ಲಿಮಿಟೆಡ್ ಪ್ರಾಜೆಕ್ಟ್ ಮ್ಯಾನೇಜರ್ ನಾಗೇಂದ್ರ ಶರ್ಮಾ ಮಾತಾನಾಡುತ್ತಾ ಭಂಡಾರಿ ಆಸ್ಪತ್ರೆಯವರು ನಮ್ಮ ಸಿಬ್ಬಂದಿಗಳಿ ಉಚಿತ ಆರೋಗ್ಯ ತಪಾಸಣೆ ಮಾಡಿದಕ್ಕೆ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಎಮ್.ಕೆ.ಭಂಡಾರಿ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಮೊಹ್ಮದ್ ರಿಯಾಜ್‌ವುದ್ದೀನ್ ಮಾತಾನಾಡುತ್ತಾ, ಮೊಟ್ಟಮೊದಲು ಬಿ.ಆರ್. ಇನ್‌ಫ್ರೋ ಪ್ರೋಜೆಕ್ಟ್ ಲಿಮಿಟೆಡ್‌ನ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ನಮ್ಮನ್ನು ಇಲ್ಲಿ ಆರೋಗ್ಯ ತಪಾಸಣೆ ಮಾಡಲಿಕ್ಕೆ ಅವಕಾಶ ಕೊಟ್ಟಿದಕ್ಕೆ ಧನ್ಯವಾದಗಳನ್ನು ಅರ್ಪಿಸುತ್ತೇನೆ.

ನಮ್ಮ ಪೌಂಡೇಷನ್ ವತಿಯಿಂದ ರಾಜ್ಯದ ಜಿಲ್ಲೆಗಳಾದ ಮೈಸೂರು, ಬಳ್ಳಾರಿ, ಸಂಡೂರು, ಕೊಪ್ಪಳ, ಬೆಳಗಾವಿ, ಬಾಗಳಕೋಟೆ, ಬೀದಾರ , ಕಲಬುರ್ಗಿ,ಯಾದಗಿರಿ, ರಾಯಚೂರುಗಳಲ್ಲಿ ಸುಮಾರು ಇಪ್ಪತ್ತೇರೆಡು ಸಾವಿರ ವಿಕಲ ಚೇತನರಿಗೆ ಉಚಿತ ಕೃತಕ ಕಾಲು ಜೋಡಣೆ ಮತ್ತು ಅವರಿಗೆ ಬೇಕಾದಂತಹ ಸಲಕರಣೆಗಳನ್ನು ಕೊಡುತ್ತಾ ಬಂದಿದ್ದೇವೆ. ಮುಂದಿನ ಕಾರ್ಯಕ್ರಮ ಚಿಕ್ಕಮಂಗಳೂರು , ಹಾಸನ, ಮಂಗಳೂರು ಜಿಲ್ಲೆಗಳಲ್ಲಿ ಕಾರ್ಯಕ್ರಮ ಮಾಡುವ ಉದ್ದೇಶವನ್ನು ಇಟ್ಟಿಕೊಂಡಿರುತ್ತೇವೆ. ರಾಯಚೂರು ನಗರದಲ್ಲಿ ಸುಮಾರು 20 ಬಡಾವಣೆಗಳಲ್ಲಿ ಉಚಿತ ಆರೋಗ್ಯ ತಪಸಾಣ ಶಿಬಿರನ್ನು ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಸಹ ಇಂತಹ ಶಿಬಿರಗಳು ಮಾಡುತ್ತೇವೆ. ನಮ್ಮ ಆಸ್ಪತ್ರೆಯಲ್ಲಿ ಆಯುಷ್‌ಮಾನ್ ಭಾರತ, ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಲಭ್ಯವಿರುತ್ತದೆ ಇದರ ಸದುಪಯೋಗವನ್ನು ಸರ್ಕಾರಿ ನೌಕರರು ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ವೇದಿಕೆಯ ಮೇಲೆ ಡಾ. ವರುಣ ಕುಮಾರ ಎಂ.ಡಿ., ಸುದೀರ್ ಸಿಂಗ್, ರೋಹಿತ್ ಲೋಕಂಡೆ ರಾಜೇಶ ಸಿಂಗ್, ಅಶೋಕ ಕುಮಾರ ಸಿಂಗ, ಜಿತೇಂದ್ರ ಪಟೇದರ್ , ಮಿರಜ್ ಬಹುದೂರು, ಅಜಯಾ ಮನವತ್, ಪ್ರಮೋದ ಕುಮಾರ ಮತ್ತು ಭಂಡಾರಿ ಆಸ್ಪತ್ರೆಯ ಅಬ್ದುಲ್ ರಹೀಮ್ , ಜಾಫರ್ ಸಿಬ್ಬಂದಿಗಳು ಹಾಜರಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L